ಸಂಪುಟ : 10 ಸಂಚಿಕೆ: 191 ಪುಟ : 4+2 ಬೆಲೆ: 3.00 ಶನಿವಾರ ಸೆಪ್ಟೆಂಬರ್ 06 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 191 Pages : 4+2 Price : 3.00 Saturday September 06 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆಯಲ್ಲಿ 'ಜಿಲ್ಲಾ ಉತ್ತಮ ಶಿಕ್ಷಕ' ಪ್ರಶಸ್ತಿ ಪ್ರದಾನ, ನಿವೃತ್ತ ಶಿಕ್ಷಕರಿಗೆ ಸನ್ಮಾನ

## ಶ್ರೇಷ್ಠ ಶಿಕ್ಷಕರಾಗಿ ಸುಭದ್ರ ರಾಷ್ಟ್ರ ನಿರ್ಮಿಸೋಣ



**■ವಿಜಯಸಾಕ್ಷಿ ಸುದ್ದಿ, ಗದಗ**

ತತ್ವಜ್ಞಾನಿ, ಶ್ರೇಷ್ಠ ಶಿಕ್ಷಕ, ರಾಷ್ಟ್ರಪತಿಯಾಗಿ ಡಾ. ರಾಧಾಕೃಷ್ಣನ್‌ರವರ ಶಿಸ್ತು, ಶ್ರದ್ಧೆ ನಮಗೆಲ್ಲ ಮಾದರಿಯಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅಭಿಪ್ರಾಯಪಟ್ಟರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಡಾ. ಸರ್ವಪಲ್ಲಿ ರಾಧಾಕೃಷ್ಣನ್‌ರ ಜನ್ಮದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ, ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನ ಸಮಾರಂಭ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಬಹಳ ಶಿಕ್ಷಕರು ಸ್ಪರ್ಧಾತ್ಮಕ ಪರೀಕ್ಷೆ ಬರೆದು, ಉನ್ನತ ಹುದ್ದೆ ಅಲಂಕರಿಸಿ ಸಮಾಜ ಸೇವೆ ಮಾಡುತ್ತಿದ್ದಾರೆ. ಡಾ. ಸರ್ವಪಲ್ಲಿ ರಾಧಾಕೃಷ್ಣನ್‌ರ ಜನ್ಮದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ ಆಚರಿಸುದ್ದೇವೆ. ರಾಧಾಕೃಷ್ಣನ್ ಅವರಿಗೆ ಶಿಕ್ಷಕರ ಮೇಲೆ ಅಪಾರ ಪ್ರೀತಿ, ಗೌರವ ಇದ್ದುದರಿಂದ ತಮ್ಮ ದಿನಾಚರಣೆ ಶಿಕ್ಷಕರ ದಿನಾಚರಣೆಯಾಗಿ ಆಚರಣೆ ಮಾಡಲು ತಿಳಿಸಿದರು ಎಂದರು.

> ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರು ಸಹ ಶಿಕ್ಷಣಕ್ಕೆ ಹೆಚ್ಚು ಪ್ರೋತ್ಸಾಹ ನೀಡುತ್ತಾರೆ. ಶಾಲೆಗಳ ಕಟ್ಟಡ, ಶೌಚಾಲಯ ಸುಧಾರಣೆ, ದುರಸ್ತಿಗೆ ಸರ್ಕಾರವನ್ನು ಒತ್ತಾಯಿಸಿ, ಅನುದಾನ ಬಿಡುಗಡೆಗೆ ಪ್ರಯತ್ನ ಮಾಡುತ್ತಿದ್ದೇವೆ. ಶಿಕ್ಷಕರಿಗೆ ಇರುವ ಕೊರತೆಗಳ ಬಗ್ಗೆ ಸಹ ಸಮಾಲೋಚನೆ ಮಾಡಲಾಗುತ್ತಿದೆ. ನಿಮ್ಮ ಬೇಡಿಕೆಗಳನ್ನು ಈಡೇರಿಸಲು ಪ್ರಯತ್ನ ಸಾಗಿದೆ. ಶೀಘ್ರದಲ್ಲೇ ಇನ್ನಷ್ಟು ಪಬ್ಲಿಕ್ ಶಾಲೆಗಳನ್ನು ಆರಂಭಿಸಲು ಕ್ರಮ ವಹಿಸಲಾಗುವುದು.
>
> – **ಜಿ.ಎಸ್. ಪಾಟೀಲ.**
> ಶಾಸಕರು, ರೋಣ.

ರೋಣ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಶ್ರೇಷ್ಠ ತತ್ವಜ್ಞಾನಿ, ರಾಷ್ಟ್ರಪತಿ ಡಾ. ರಾಧಾಕೃಷ್ಣನ್ ಅವರ ಜನ್ಮ ದಿನವನ್ನು ಅದ್ದೂರಿಯಾಗಿ ಶಿಕ್ಷಕರ ದಿನಾಚರಣೆಯಾಗಿ ಆಚರಣೆ ಮಾಡುತ್ತಿರುವುದು ಸಂತಸ ತಂದಿದೆ. ಗದಗ ಜಿಲ್ಲೆ ಶೈಕ್ಷಣಿಕ ಪ್ರಗತಿಗೆ ಒತ್ತು ಕೊಡುವ ಜಿಲ್ಲೆಯಾಗಿದೆ. ಆದರೂ ಫಲಿತಾಂಶ ಸುಧಾರಣೆ ಸಮಾದಾನಕರವಿಲ್ಲ. ನಾವೆಲ್ಲರೂ ಫಲಿತಾಂಶ ಸುಧಾರಣೆಗೆ ಶ್ರಮಿಸೋಣ ಎಂದರು.

ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿ, ದೇಶದಲ್ಲಿ ಉನ್ನತಮಟ್ಟದ ಗೌರವಯುತ ಹುದ್ದೆ ಎಂದರೆ ಅದು ಶಿಕ್ಷಕರ ಹುದ್ದೆ. ಜೀವನದಲ್ಲಿ ಶಿಕ್ಷಕರ ಪಾತ್ರ ಪ್ರಮುಖವಾಗಿದೆ ಎಂದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ರಾಧಾಕೃಷ್ಣನ್ ಅವರು ದೇಶಕ್ಕೆ ಹಾಗೂ ಶಿಕ್ಷಕ ಸಮುದಾಯಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಅವರ ಮಾರ್ಗದರ್ಶನದಲ್ಲಿ ಸಾಗೋಣ ಜಿಲ್ಲೆಯಲ್ಲಿ ರಾಜ್ಯ ಪ್ರಶಸ್ತಿ ಪುರಸ್ಕೃತ ಶಿಕ್ಷಕ ಬಿ.ಜಿ. ಅಣ್ಣಿಗೇರಿ ಅವರ ಹೆಸರನ್ನು ಒಂದು ಉದ್ಯಾನವನಕ್ಕೆ ನಾಮಕರಣ ಮಾಡಿ ಗೌರವ ಸಲ್ಲಿಸಲಾಗಿದೆ ಎಂದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ, ಇಂದು ನಾವೆಲ್ಲ ಇಲ್ಲಿ ಬಂದು ಸೇರಬೇಕಾದರೆ ಅದಕ್ಕೆ ಶಿಕ್ಷಕರು ಕಾರಣ. ಶಿಕ್ಷಕರು ಇಲ್ಲದ ಸಮಾಜ ಪರಿಪೂರ್ಣ ಆಗಲಾರದು ಎಂದರು.

ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆಯ ಉಪನಿರ್ದೇಶಕ ಡಾ. ಹರಿಪ್ರಸಾದ್ ಜಿ.ವಿ. ಉಪನ್ಯಾಸ ನೀಡಿ, ಶಿಕ್ಷಕರಿಗೆ ನೀಡಿದ ದೈನಂದಿನ ಕಾರ್ಯಗಳು, ಕರ್ತವ್ಯಗಳು, ಆದುನಿಕ ತಂತ್ರಜ್ಞಾನ, ಸಿಂಥೆಟಿಕ್ ಇಂಟಲಿಜೆನ್ಸ್ ಕುರಿತು ವಿಸ್ತಾರವಾಗಿ ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ (ಆಡಳಿತ) ಆರ್.ಎಸ್. ಬುರಡಿ, ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಶಿಕ್ಷಕರು ನಿರಂತರ ಅಧ್ಯಯನಶೀಲರಾಗಿರಬೇಕು. ಅದನ್ನು ಮಕ್ಕಳಿಗೆ ಕಲಿಸುವ ರೂಢಿ ಮಾಡಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ರಾಷ್ಟ್ರಪ್ರಶಸ್ತಿ ಪುರಸ್ಕೃತ ನಿವೃತ್ತ ಶಿಕ್ಷಕ ಎಸ್.ಎನ್. ಬಳ್ಳಾರಿ, ಎಡಿಸಿ ಡಾ. ದುರಗೇಶ್ ಕೆ.ಆರ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ಡಯಟ್ ಉಪನಿರ್ದೇಶಕ ▸▸3ನೇ ಪುಟಕ್ಕೆ

ಕ.ರಾ.ಸ.ನೌ. ಸಂಘದ ನೂತನ ಜಿಲ್ಲಾಧ್ಯಕ್ಷರ, ಪದಾಧಿಕಾರಿಗಳ ಪದಗ್ರಹಣ ಸಮಾರಂಭ

## ನೌಕರರ ಜನಸ್ನೇಹಿ ಕಾರ್ಯಾಗಾರ ಇಂದು





**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘ ಬೆಂಗಳೂರು, ಜಿಲ್ಲಾ ಶಾಖೆ ಗದಗ, ವಿವಿಧ ಇಲಾಖೆಗಳ ವೃಂದ ಸಂಘಗಳು ಮತ್ತು ನೌಕರರ ಸಂಘಟನೆಗಳ ಸಹಯೋಗದಲ್ಲಿ ಸಂಘದ ನೂತನ ಜಿಲ್ಲಾಧ್ಯಕ್ಷರ ಹಾಗೂ ಜಿಲ್ಲಾ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಮತ್ತು ನೌಕರರ ಜನಸ್ನೇಹಿ ಕಾರ್ಯಾಗಾರವನ್ನು ಸೆ.6ರಂದು ಬೆಳಿಗ್ಗೆ 11 ಗಂಟೆಗೆ ನಗರದ ಭಾರತ ರತ್ನ ಪಂ. ಭೀಮಸೇನ ಜೋಶಿ ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಮಣಕವಾಡದ ಅನ್ನದಾನೇಶ್ವರ ಮಠದ ಅಭಿನವ ಮೃತ್ಯುಂಜಯ ಮಹಾಸ್ವಾಮೀಜಿ ವಹಿಸುವರು. ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಾಕ್ಷರಿ ಕಾರ್ಯಕ್ರಮ ಉದ್ಘಾಟಿಸುವರು.

ರಾಜ್ಯ ಸರ್ಕಾರಿ ನೌಕರರ ಗದಗ ಜಿಲ್ಲಾ ಶಾಖೆಯ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಖನಿಜ ಅಬಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಜಿ.ಎಸ್. ಪಾಟೀಲ, ಶಾಸಕರಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಶಾಸಕ ಡಿ.ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ನೌಕರ ಸಂಘದ ನಿಕಟಪೂರ್ವ ರಾಜ್ಯ ಹಿರಿಯ ಉಪಾಧ್ಯಕ್ಷ ಹಾಗೂ ಜಿಲ್ಲಾಧ್ಯಕ್ಷ ಡಾ. ರವಿ ಗುಂಜಿಕರ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ದುರಗೇಶ ಕೆ.ಆರ್, ಉಪ ವಿಭಾಗಾಧಿಕಾರಿ ಗಂಗಪ್ಪ ಎಂ ಪಾಲ್ಗೊಳ್ಳುವರು. ಜಿಲ್ಲಾ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳಾದ ಡಿ.ಟಿ ವಾಲ್ಮೀಕಿ, ಎಂ.ಎಂ. ನಿಟ್ಟಾಲಿ, ಡಿ.ಎಸ್. ತಳವಾರ, ಸಿದ್ದಪ್ಪ ಲಿಂಗದಾಳ ಸೇರಿದಂತೆ ತಾಲೂಕಾ ಅಧ್ಯಕ್ಷರುಗಳಾದ ಡಾ. ಎಂ.ಎ. ಹಾದಿಮನಿ, ಮಲ್ಲಿಕಾರ್ಜುನ್ ಹಿರೇಮಠ, ಜಿ.ಡಿ. ಹವಳದ, ಶಿವಪ್ಪ ಹದ್ದಿ, ಎಸ್.ಜಿ. ದಾನಪ್ಪಗೌಡ್ರ, ನಾಗರಾಜ್ ಹಳ್ಳಿಕೇರಿ ಸೇರಿದಂತೆ ಜಿಲ್ಲಾ ನಿರ್ದೇಶಕರು ಸರ್ವರಿಗೂ ಸ್ವಾಗತ ಕೋರಿದ್ದಾರೆ. ಕಾರ್ಯಕ್ರಮಕ್ಕೂ ಮುನ್ನ ಜಿಲ್ಲಾಡಳಿತ ಭವನದಿಂದ ಭಾರತ ರತ್ನ ಪಂ. ಭೀಮಸೇನ್ ಜೋಶಿ ರಂಗಮಂದಿರದವರೆಗೆ ಕುಂಭಮೇಳ ಮೆರವಣಿಗೆ ಜರುಗಲಿದೆ. ಸಾಂಸ್ಕೃತಿಕ ರಸದೌತಣವನ್ನು ಗದಗ ನಟರಂಗ ಕಲ್ಚರಲ್ ಅಕಾಡೆಮಿ ತಂಡದಿಂದ ಏರ್ಪಡಿಸಿದೆ.

> ಅತಿಥಿಗಳಾಗಿ ಗಿರಿಗೌಡ ಎಚ್, ಬಸವರಾಜು, ಶಿವರುದ್ರಯ್ಯ, ಮಲ್ಲಿಕಾರ್ಜುನ ಬಳ್ಳಾರಿ, ಸುರೇಶ ಶೇಡಸ್ಯಾಳ, ನಾಗರಾಜ ಜುಮ್ಮಣ್ಣವರ, ಆರ್.ಮೋಹನ್ ಕುಮಾರ್, ಎಲ್.ಮೋಹನ್ ಕುಮಾರ್, ಹರಿ ರಾಮಕೃಷ್ಣ, ಎಸ್.ಎಫ್. ಸಿದ್ದನಗೌಡರ, ಬಸವರಾಜ ರಾಯವ್ವಗೋಳ, ಮಲ್ಲೇಶ್ ಕರಿಗಾರ, ಬಿ.ಎ. ಕುಂಬಾರ ಪಾಲ್ಗೊಳ್ಳುವರು. ವೈ.ಎನ್. ಗೌಡರ, ವಾಸಣ್ಣ ಕುರಡಗಿ, ರಾಜು ಕುರಡಗಿ, ಪ್ರೇಮನಾಥ್ ಗರಗ, ಆರ್.ಎಲ್. ಲಿಂಬನಾಯಕರ, ಕೆ.ಎಫ್. ಹಳ್ಯಾಳ ಉಪಸ್ಥಿತರಿರುವರು.

## ಚಂದ್ರಗ್ರಹಣ: ಭಾನುವಾರ ಘಾಟಿ ಸುಬ್ರಹ್ಮಣ್ಯ ದೇವಾಲಯ ಸಂಜೆ ವೇಳೆ ಬಂದ್!

**■ವಿಜಯಸಾಕ್ಷಿ ಸುದ್ದಿ, ಚಿಕ್ಕಬಳ್ಳಾಪುರ**

ದೊಡ್ಡಬಳ್ಳಾಪುರ ತಾಲೂಕಿನ ಶ್ರೀ ಘಾಟಿ ಸುಬ್ರಹ್ಮಣ್ಯ ದೇವಾಲಯವನ್ನು ಭಾನುವಾರ ಸಂಜೆ 4:30 ಗಂಟೆಗೆ ಬಂದ್ ಮಾಡಲಾಗುತ್ತಿದೆ.

ಸೆಪ್ಟೆಂಬರ್ 7 ರಂದು ಭಾನುವಾರ ಮಧ್ಯರಾತ್ರಿ ಚಂದ್ರಗ್ರಹಣ ಗೋಚರಿಸಲಿರುವ ಹಿನ್ನೆಲೆಯಲ್ಲಿ ಬಂದ್ ಮಾಡಲಾಗುತ್ತಿದೆ.

ಗ್ರಹಣದ ಅಂಗವಾಗಿ ಪ್ರತಿ ದಿನವೂ 8:30ಕ್ಕೆ ಕ್ಲೋಸ್ ಮಾಡಲಾಗುತ್ತಿದ್ದ ದೇವಾಲಯದ ಬಾಗಿಲನ್ನ ಈ ವರ್ಷ ಸಂಜೆ 4:30ಕ್ಕೆ ಮುಚ್ಚಲಾಗುತ್ತದೆ. ಗ್ರಹಣದ ನಂತರ ಎಂದಿನಂತೆ ಮರುದಿನ ಬೆಳಿಗ್ಗೆ ಶುದ್ದೀಕರಣ ಮಾಡಿ ಬಳಿಕ ದೇವಾಲಯದ ಬಾಗಿಲು ತೆರೆಯಲಾಗುತ್ತದೆ. ಹೀಗಾಗಿ ಭಕ್ತಾದಿಗಳು ಸಹಕರಿಸುವಂತೆ ದೇವಾಲಯದ ಆಡಳಿತಾಧಿಕಾರಿಗಳು ಮನವಿ ಮಾಡಿಕೊಂಡಿದ್ದಾರೆ.

ಸುದೀರ್ಘ ಅವಧಿಯ ಅಪರೂಪದ ಚಂದ್ರಗ್ರಹಣ ಭಾರತದಾದ್ಯಂತ ಗೋಚರಿಸಲಿದೆ. ಸೆ.7 ಮತ್ತು 8 ರಂದು ಚಂದ್ರಗ್ರಹಣ ಸಂಭವಿಸಲಿದೆ.



## ಮುಹಮ್ಮದ ಪೈಗಂಬರರ ಚಿಂತನೆಗಳು ಶಾಶ್ವತ



■ವಿಜಯಸಾಕ್ಷಿ ಸುದ್ದಿ, ಗದಗ

ಮುಹಮ್ಮದ ಪೈಗಂಬರರು ತಮ್ಮ ಪ್ರೀ, ಮಮತೆ ಮತ್ತು ಶಾಂತಿಯ ಸಂದೇಶಗಳ ಮೂಲಕ ಸಮಗ್ರ ಜೀವನ ವ್ಯವಸ್ಥೆಯನ್ನು ಸ್ಥಾಪಿಸಿ ಅದನ್ನು ಇಡೀ ಜಗತ್ತಿಗೆ ಪಸರಿಸಿದ್ದಾರೆ. ಅದ್ಭುತ ಸಂತರಾಗಿ ಗುರುತಿಸಿಕೊಂಡಿರುವ ಅವರ ಚಿಂತನೆಗಳು ಸದಾ ಕಾಲ ಇರುತ್ತವೆ ಎಂದು ಕರ್ನಾಟಕ ರಾಜ್ಯ ಸರಕಾರಿ ಮುಸ್ಲಿಂ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ. ರಫೀ ಹೇಳಿದರು.

ಕರ್ನಾಟಕ ರಾಜ್ಯ ಸರಕಾರಿ ಮುಸ್ಲಿಂ ನೌಕರರ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ಮುಹಮ್ಮದ ಪೈಗಂಬರರ ಜನ್ಮದಿನದ ಅಂಗವಾಗಿ ಮಂಜು ಶಿಕ್ಷಣ ಸಂಸ್ಥೆಯ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆ, ಹೆರಿಗೆ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ ರೋಗಿಗಳಿಗೆ ಹಣ್ಣು-ಹಂಪಲ ವಿತರಿಸಿ ಅವರು ಮಾತನಾಡಿದರು.

ಉಪಾಧ್ಯಕ್ಷ ಎ.ಎಲ್. ಬಿಜಾಪುರ ಮಾತನಾಡಿ, ಸ್ತ್ರೀಕುಲಕ್ಕೆ ಅಭಿವ್ಯಕ್ತಿ ಸ್ವಾತಂತ್ರ್ಯದ ಮಹತ್ವವನ್ನು ಪ್ರವಾದಿ ಪೈಗಂಬರರು ಪರಿಚಯಿಸಿದರು. ವಿವಾಹ ಸಂದರ್ಭದಲ್ಲಿ ವಧುದಕ್ಷಿಣೆ ಹೆಣ್ಣಿನ ಹಕ್ಕು ಎಂದು ಪರಿಗಣಿಸಿದರು. ತಾಯಿ, ಸಹೋದರಿ, ಪತ್ನಿ, ಪುತ್ರಿ ಎಂಬ ನೆಲೆಯಲ್ಲಿ ಹೆಣ್ಣಿನೊಂದಿಗೆ ಜನರ ವ್ಯವಹಾರ ಹೇಗಿರಬೇಕು ಎಂಬುದನ್ನು ಹೇಳಿಕೊಟ್ಟರು. ಕಾರ್ಮಿಕನೊಬ್ಬ ಕೆಲಸ ಮುಗಿಸಿ ಆತನ ಬೆವರು ಆರುವ ಮೊದಲೇ ಕೂಲಿ ಕೊಟ್ಟುಬಿಡಿ ಎನ್ನುವ ಮೂಲಕ ಕಾರ್ಮಿಕನ ಹಕ್ಕು ರಕ್ಷಣೆ ಮಾಡಿದರು ಎಂದು ಹೇಳಿದರು. ಈ ಸಂದರ್ಭದಲ್ಲಿ ಕಾರ್ಯದರ್ಶಿ ರಷೀದ, ಹಿರಿಯರಾದ ಜನಾಬ ಮಹಬೂಬ ಕಾಗದಗಾರ, ಮುಹಮ್ಮದ ಶೋಯೆಬ ಬಿಜಾಪೂರ, ಅಬ್ದುಲ್ ಸಮದ ಸೇರಿದಂತೆ ಹಿರಿಯರು ಇದ್ದರು.

## ಬ್ಯಾಲೆಟ್ ವಿರೋಧಿಸುತ್ತೇವೆ, ಇದು ಕೀಳುಮಟ್ಟದ ಯೋಚನೆ; ಅಶ್ವಥ್ ನಾರಾಯಣ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸರ್ಕಾರದ ಬ್ಯಾಲೆಟ್ ಪೇಪರ್ ಚುನಾವಣಾ ನಿರ್ಧಾರಕ್ಕೆ ಶಾಸಕ ಅಶ್ವಥ್ ನಾರಾಯಣ ಆಕ್ರೋಶ ಹೊರ ಹಾಕಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್‌ನವರು ಎಲ್ಲದರಲ್ಲೂ ಹಸ್ತಕ್ಷೇಪ ಮಾಡುವ ದುರುದ್ದೇಶ ಇಟ್ಟುಕೊಂಡಿದ್ದಾರೆ. ಜನರ ಕೋಪ ಮುಗಿಲಿಗೇರಿದೆ. ಈ ಆಕ್ರೋಶವನ್ನು ಚುನಾವಣೆಯಲ್ಲಿ ತೋರಿಸುತ್ತಾರೆ ಎಂಬ ಭಯ ಇದೆ. ಹಾಗಾಗಿ ಬ್ಯಾಲೆಟ್ ಪೇಪರ್‌ಗೆ ಹೋಗಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ.

ತಂತ್ರಜ್ಞಾನದ ಜಗತ್ತಿನಲ್ಲಿ ಯಾರಾದರೂ ಮತ್ತೆ ಹಿಂದಕ್ಕೆ ಹೋಗ್ತಾರಾ? ಇವರು ಮಾಡುವಂತಹ ಕ್ರಮ ರಾಜ್ಯವನ್ನು ಹಿಂದಕ್ಕೆ ತೆಗೆದುಕೊಂಡು ಹೋಗುವಂತದ್ದು.

### ದೂದಪೀರಾಂ ದರ್ಗಾದಿಂದ ಮುಹಮ್ಮದ ಪೈಗಂಬರರ ಭಾವಚಿತ್ರ ಮೆರವಣಿಗೆ

# ಪೈಗಂಬರರದು ತ್ಯಾಗಭರಿತ ಬದುಕು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಾನ್ ಮಾನವತಾವಾದಿ, ಶಾಂತಿದೂತ, ಪ್ರವಾದಿ ಮುಹಮ್ಮದ ಪೈಗಂಬರರ ಜನ್ಮದಿನದ ಅಂಗವಾಗಿ ಪವಿತ್ರ ಈದ್ ಮಿಲಾದ್ ಹಬ್ಬವನ್ನು ಶುಕ್ರವಾರ ಮುಸ್ಲಿಂ ಸಮಾಜ ಬಾಂಧವರು ಶ್ರದ್ಧಾ-ಭಕ್ತಿ ಮತ್ತು ವಿಜೃಂಭಣೆಯಿಂದ ಆಚರಿಸಿದರು.

ಹೊಸ ಉಡುಗೆ ಧರಿಸಿದ ಮುಸ್ಲಿಂ ಸಮಾಜ ಬಾಂಧವರು ಬೆಳಿಗ್ಗೆ ಮಸೀದಿಗಳಲ್ಲಿ ಸಾಮೂಹಿಕ ಪ್ರಾರ್ಥನೆ ನಡೆಸಿದರು. ಬಳಿಕ ಪಟ್ಟಣದ ದೂದಪೀರಾಂ ದರ್ಗಾದಿಂದ ಮುಹಮ್ಮದ ಪೈಗಂಬರರ ಭಾವಚಿತ್ರ ಮತ್ತು ಮುಸ್ಲಿಂ ಧರ್ಮದ ಪವಿತ್ರ ಕ್ಷೇತ್ರಗಳ ಚಿತ್ರಗಳನ್ನೊಳಗೊಂಡ ಮೆರವಣಿಗೆ ಮುಖ್ಯ ಬಜಾರ್ ರಸ್ತೆ, ಶಿಗ್ಗಿ ನಾಕಾ, ಗದಗ ನಾಕಾ, ಮೋಮಿನಗಲ್ಲಿ, ಬಳಿಗಾರ ಓಣಿಯ ಮೂಲಕ ಸಾಗಿ ದರ್ಗಾದಲ್ಲಿ ಸಂಪನ್ನಗೊಂಡಿತು.



ಅಂಜುಮನ್-ಎ-ಇಸ್ಲಾಂ ಕಮಿಟಿ, ದರ್ಗಾ ಕಮಿಟಿ ಹಾಗೂ ಹಿರಿಯರು, ಯುವಕರು, ಮಕ್ಕಳು ಸೇರಿ ಸಾವಿರಾರು ಸಂಖ್ಯೆಯ ಮುಸ್ಲಿಂ ಬಾಂಧವರು ಹೊಸ ಉಡುಗೆ ತೊಟ್ಟು ಪೈಗಂಬರರ ಗೀತೆಗಳೊಂದಿಗೆ ಧರ್ಮದ ಘೋಷಣೆ ಕೂಗುತ್ತಾ ಹರ್ಷದಿಂದ ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಅಂಜುಮನ್ ಕಮಿಟಿ ಅಧ್ಯಕ್ಷ ಎಂ.ಎಂ. ಗದಗ ಮಾತನಾಡಿ, ಮುಹಮ್ಮದ ಪೈಗಂಬರರು ಇಡೀ ಮಾನವ ಕುಲದ ಒಳಿತಿಗಾಗಿ ಶಾಂತಿ, ಸಮಾನತೆಯ ಸಂದೇಶ ಸಾರಿದ್ದಾರೆ. ಸರಳ, ಸಚ್ಚಾರಿತ್ರ್ಯ ಮತ್ತು ತ್ಯಾಗಭರಿತ ಬದುಕು ಸವೆಸಿ ಅವರು 'ನನ್ನ ಜೀವನವೇ ನನ್ನ ಸಂದೇಶ' ಎಂಬಂತೆ ಬದುಕಿ ಮನುಕುಲದಲ್ಲಿ ಚಿರಸ್ಥಾಯಿಯಾಗಿದ್ದಾರೆ. ದೇವನ ಸಂದೇಶವಾಹಕರಾಗಿ ಮಾನವ ಸಮೂಹಕ್ಕೆ ಜ್ಞಾನದ ಬೆಳಕು ಮತ್ತು ಸನ್ಮಾರ್ಗದ ಹಾದಿಯನ್ನು ತೋರಿಸಿದ್ದಾರೆ. ಅವರ ಜೀವನಾದರ್ಶ, ತೋರಿದ ಮಾನವೀಯ ಮೌಲ್ಯಗಳನ್ನು ಸದಾ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಅವರ ಜಯಂತ್ಯುತ್ಸವ ಸಾರ್ಥಕವಾಗುತ್ತದೆ ಎಂರು.

ಮೆರವಣಿಗೆಗೆ ಸಿಪಿಐ ನಾಗರಾಜ ಮಾಡಳ್ಳಿ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ದೂದನಾನಾ ದರ್ಗಾ ಸಮಿತಿ ಅಧ್ಯಕ್ಷ ಸುಲೇಮಾನ ಕಣಕೆ, ಪುರಸಭೆ ಉಪಾಧ್ಯಕ್ಷ ಫಿರ್ದೋಸ್ ಆಡೂರ, ಸದಸ್ಯರಾದ ಎಸ್.ಕೆ. ಹವಾಲ್ದಾರ, ಮುಸ್ತಾಕ್‌ಅಹ್ಮದ್ ಶಿರಹಟ್ಟಿ, ಸಿಕಂದರ ಕಣಕೆ, ಡಿ.ಜೆ. ಮುಚ್ಚಾಲೆ, ವೀರಕನ್ನಡಿಗ ಟಿಪ್ಪು ಸೇನೆ ಅಧ್ಯಕ್ಷ ಜಾಕೀರಹುಸೇನ್ ಹವಾಲ್ದಾರ, ಅಂಜುಮನ್ ಕಮಿಟಿ ಉಪಾಧ್ಯಕ್ಷ ಅಬ್ದುಲ್‌ಕರೀಂ ಸೂರಣಗಿ, ಎನ್.ಎಂ. ಗದಗ, ದಾದಾಪೀರ ತಂಬಾಕದ, ಇಕ್ಬಾಲ್ ಸೂರಣಗಿ, ಜಮೀಲ್ ಸೂರಣಗಿ, ಪೈಮ್ ಪಲ್ಲಿ, ಅಬ್ಜಲ್ ರಿತ್ತಿ ಮತ್ತಿತರರಿದ್ದರು.

ಮೆರವಣಿಗೆಯ ವೇಳೆ ಮುಸ್ಲಿಂ ಬಾಂಧವರು ಜನತೆಗೆ ಸಿಹಿ, ಹಣ್ಣು, ತಂಪು ಪಾನೀಯ ವಿತರಿಸಿದರು. ಹಬ್ಬದ ಅಂಗವಾಗಿ ಪಟ್ಟಣದಲ್ಲಿರುವ ಮಸೀದಿ, ತಮ್ಮ ಅಂಗಡಿ, ಮನೆಗಳಿಗೆ ವಿದ್ಯುತ್ ದೀಪ, ಪುಷ್ಪಗಳಿಂದ ಅಲಂಕಾರ ಮಾಡಲಾಗಿತ್ತು.



# ಈದ್ ಮಿಲಾದ್ ಕೇವಲ ಮನೋರಂಜನೆಯಾಗದಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಈದ್ ಮಿಲಾದ್ ಅಂಗವಾಗಿ ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ಗದಗ ಜಿಲ್ಲಾ ಘಟಕದಿಂದ ಸಿಹಿ ವಿತರಿಸಿ, ರಾಷ್ಟ್ರಪತಿ ಪದಕಕ್ಕೆ ಭಾಜನರಾದ ಬೆಟಗೇರಿ ಬಡಾವಣೆಯ ಪಿಎಸ್‌ಐ ಮಾರುತಿ ಜೋಗದಂಡ್ಕರರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದ ಸಾನ್ನಿಧ್ಯವನ್ನು ಧರ್ಮ ಗುರುಗಳಾದ ಮೌಲಾನಾ ಬಗಲಿ ವಹಿಸಿದ್ದರು. ನಗರಸಭಾ ಮಾಜಿ ಸದಸ್ಯ ಫಕೀರಪ್ಪ ಹೆಬಸೂರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಎಲ್ಲರೂ ಪ್ರವಾದಿಗಳು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯಬೇಕೆಂದರು.

ಸನ್ಮಾನ ಸ್ವೀಕರಿಸಿದ ಮಾರುತಿ ಜೋಗದಂಡ್ಕರ ಮಾತನಾಡಿ, ಮುಸ್ಲಿಂ ಬಾಂಧವರು ಶಾಂತಿ ಪ್ರಿಯರು. ಏಕೆಂದರೆ ಇಸ್ಲಾಂ ಶಾಂತಿಯ ಬೋಧನೆಯನ್ನು ಮಾಡುತ್ತದೆ. ಯುವಕರು ದುಶ್ಚಟಗಳಿಂದ ದೂರವಿರಬೇಕು ಎಂದು ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಎಂ.ಡಿ. ಜಾಫರ್ ಡಾಲಾಯತ ಮಾತನಾಡಿ, ಈದ್ ಮಿಲಾದ್ ಎಂದರೆ ಕೇವಲ ಮನೋರಂಜನೆ ಆಗಬಾರದು. ನಾವೆಲ್ಲ ಪ್ರವಾದಿಗಳು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯಬೇಕು. ಅವರ ತತ್ವ-ಆದರ್ಶಗಳಂತೆ ನಮ್ಮ ಜೀವನವನ್ನು ಸಾಗಿಸಬೇಕು ಎಂದು ಹೇಳಿದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ ಮಾತನಾಡಿ, ಪ್ರವಾದಿಗಳು ಬಹಳ ಸರಳ ಹಾಗೂ ಗೌರವದಿಂದ ತಮ್ಮ ಜೀವನವನ್ನು ಸಾಗಿಸಿದರು. ಅವರಂತೆ ನಾವು ನಮ್ಮ ಜೀವನ ಸಾಗಿಸಬೇಕು ಎಂದು ಹೇಳಿದರು.




ಕಾಂಗ್ರೆಸ್ ಅಲ್ಪಸಂಖ್ಯಾತ ಜಿಲ್ಲಾ ಘಟಕದ ಅಧ್ಯಕ್ಷ ಉಮರ ಫಾರೂಕ್ ಹುಬ್ಬಳ್ಳಿ ಮಾತನಾಡಿ, ಪ್ರವಾದಿಗಳು ಯಾವತ್ತೂ ಬೇರೆ ಧರ್ಮವನ್ನು ನಿಂದಿಸಲಿಲ್ಲ. ಪ್ರತಿಯೊಂದು ಧರ್ಮಕ್ಕೂ ಗೌರವ ನೀಡಿದರು. ಅವರಂತೆ ನಾವು ಬೇರೆ ಧರ್ಮಗಳಿಗೆ ಗೌರವ ನೀಡುವಂತರಾಗಬೇಕು ಹೇಳಿದರು. ಕಾರ್ಯಕ್ರಮದಲ್ಲಿ ಮುಸ್ಲಿಂ ಮಹಾಸಭಾದ ಸದಸ್ಯರಾದ ರಹೀಂ ಸಾಬ್ ದೊಡ್ಡಮನಿ, ಯಾಸಿನ್ ಮುಲ್ಲಾ, ಅಫ್ಜಲ್ ಮನಿಯಾರ, ಗಣ್ಯರಾದ ಅನ್ವರ್ ಶಿರಹಟ್ಟಿ, ಇರ್ಫಾನ್ ಡಂಬಳ, ಯೂಸುಫ್ ರಂಗ-ರೆಜ್, ಮುಕ್ತುಂ ಹುಸೇನ್ ಜಮಾದಾರ, ಇಸಾಕ್ ಇರಕಲ್, ಇಬ್ರಾಹಿಂ ಅತ್ತಾರ, ಸಲೀಂ ಶಿರಹಟ್ಟಿ, ಅನಿಶ್ ಲಾಲಕೋಟಿ, ರಾಜೇಸಾಬ ರೋಣದ ಉಪಸ್ಥಿತರಿದ್ದರು.

### ಗದಗ-ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್‌ನಿಂದ ಕುರ್ಚಿಗಳ ಕೊಡುಗೆ

# ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಶ್ರಮಿಸಬೇಕಿದೆ




■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಶಾಲೆಗಳು ಇಂದು ಸಬಲೀಕರಣಗೊಳ್ಳಬೇಕಾಗಿದ್ದು, ಶಿಕ್ಷಣ ಇಲಾಖೆಯೊಂದಿಗೆ ಸಂಘ-ಸಂಸ್ಥೆಗಳು ಕೈಜೋಡಿಸಿ ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಶ್ರಮಿಸಬೇಕಾಗಿದೆ. ಮಕ್ಕಳ ಶೈಕ್ಷಣಿಕ ಅಭಿವೃದ್ಧಿಯೇ ನಮ್ಮೆಲ್ಲರ ಗುರಿ ಎಂದು ಗದಗ-ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್ ಅಧ್ಯಕ್ಷೆ ಅಶ್ವಿನಿ ಜಗತಾಪ ಹೇಳಿದರು.

ಅವರು ಬುಧವಾರ ಗದಗ-ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್‌ನಿಂದ ವಿಶೇಷ ಚೇತನ ಮಕ್ಕಳ ಕಲಿಕಾ ಕೇಂದ್ರಕ್ಕೆ ಕುಳಿತುಕೊಳ್ಳುವ ಕುರ್ಚಿಗಳನ್ನು ದೇಣಿಗೆ ನೀಡುವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವಿಶೇಷ ಚೇತನ ಮಕ್ಕಳು ಎಲ್ಲರಂತೆ ಆಗಬೇಕು. ಅವರಲ್ಲಿರುವ ಸೂಕ್ತ ಪ್ರತಿಭೆಗಳಿಗೆ ಪ್ರೋತ್ಸಾಹ ಅವಶ್ಯವಾಗಿದೆ. ಸರ್ಕಾರಿ ಶಾಲೆಗಳು ಮಕ್ಕಳಲ್ಲಿ ಆತ್ಮವಿಶ್ವಾಸವನ್ನು ತುಂಬುತ್ತವೆ. ಇಂತಹ ಮಕ್ಕಳ ತಾಯಂದಿರು ಎದೆಗುಂದದೆ ಮಕ್ಕಳನ್ನು ಪ್ರೀತಿಯಿಂದ ಬೆಳೆಸಬೇಕು ಎಂದರು.

ಕುರ್ಚಿಗಳನ್ನು ಕೊಡುಗೆಯಾಗಿ ನೀಡಿದ ಕ್ಲಬ್‌ನ ಮಾಜಿ ಅಧ್ಯಕ್ಷೆ ಅನ್ನಪೂರ್ಣ ವರವಿ ಮಾತನಾಡಿ, ಅಂಗವಿಕಲತೆ ಶಾಪವಲ್ಲ. ಇಂತಹ ಮಕ್ಕಳ ಕಲಿಕೆಗೆ ಸಹಕಾರ ಅವಶ್ಯ. ತಾಯಂದಿರರಿಗೆ ಸ್ಫೂರ್ತಿ ತುಂಬುವ ಕಾರ್ಯ ನಡೆಯಬೇಕಾಗಿದೆ ಎಂದರು. ಕ್ಲಬ್‌ನ ಸಿಪಿಸಿಸಿ ಮೀನಾಕ್ಷಿ ಕೊರವನವರ ಮಾತನಾಡಿ, ಸರ್ಕಾರಿ ಶಾಲೆಗಳನ್ನು ದತ್ತು ಪಡೆಯುವದು ಅದರ ಅಗತ್ಯತೆಗಳನ್ನು ಪೂರೈಸುವ ಕಾರ್ಯವನ್ನು ನಮ್ಮ ಸಂಸ್ಥೆಯು ನಿರ್ವಹಿಸುತ್ತಿದೆ. ಈ ವರ್ಷ ಸರ್ಕಾರಿ ಹೆಣ್ಣು ಮಕ್ಕಳ ಶಾಲೆ ನಂ. 4ನ್ನು ದತ್ತು ಪಡೆದು ಅಲ್ಲಿಯ ವಿಶೇಷ ಚೇತನ ಮಕ್ಕಳಿಗೆ ಫಿಜೋಥೆರಪಿಗೆ ಬಂದಾಗ ತಾಯಂದಿರಿಗೆ ಕುಳಿತುಕೊಳ್ಳಲು ಸಹಾಯ ಆಗಲೆಂದು ಕ್ಲಬ್‌ನ ಮಾಜಿ ಅಧ್ಯಕ್ಷೆ ಅನ್ನಪೂರ್ಣ ವರವಿ ಕುರ್ಚಿಗಳನ್ನು ಕೊಡುಗೆಯಾಗಿ ನೀಡಿದ್ದಾರೆ ಎಂದರು. ಕ್ಷೇತ್ರ ಸಮನ್ವಯ ಅಧಿಕಾರಿ ಎಸ್.ಪಿ. ಪ್ರಭಯ್ಯನಮಠ ಮಾತನಾಡಿ, ವಿಶೇಷ ಚೇತನ ಮಕ್ಕಳಿಗಾಗಿ ಸರ್ಕಾರ ನೀಡುವ ಎಲ್ಲ ಸೌಲಭ್ಯಗಳನ್ನು ಮಕ್ಕಳಿಗೆ ಒದಗಿಸಲಾಗುತ್ತಿದ್ದು, ಅದರೊಂದಿಗೆ ಸಂಘ-ಸಂಸ್ಥೆಗಳು ಕೈಜೋಡಿಸುತ್ತಿರುವದಕ್ಕೆ ಅಭಿನಂದಿಸಿದರು.

ವೇದಿಕೆಯ ಮೇಲೆ ಡೈಟ್‌ನ ಹಿರಿಯ ಉಪನ್ಯಾಸ ಡಿ.ಎಸ್. ಅರವಟಗಿ ಉಪಸ್ಥಿತರಿದ್ದರು. ಕ್ಲಬ್‌ನ ಬುಲಿಟಿನ್ ಎಡಿಟರ್ ವೀಣಾ ಕಾವೇರಿ ಸ್ವಾಗತಿಸಿದರು. ಕ್ಲಬ್‌ನ ಮಾಜಿ ಅಧ್ಯಕ್ಷರುಗಳಾದ ಶಾಂತಾ ನಿಂಬಣ್ಣವರ ಪರಿಚಯಿಸಿದರು. ಸುಲೋಚನಾ ಐಹೊಳಿ ನಿರೂಪಿಸಿದರು. ಶಾಂತಾ ಮುಂದಿನಮನಿ ವಂದಿಸಿದರು.

ಕಾರ್ಯಕ್ರಮದಲ್ಲಿ ಗದಗ-ಬೆಟಗೇರಿ ಶಿಕ್ಷಕರ ಸಂಘದ ಅಧ್ಯಕ್ಷ ಎಸ್.ಕೆ. ಮಂಗಳಗುಡ್ಡ, ಎಸ್.ಆರ್.ಪಿ ಕೇಂದ್ರದ ಮುಖ್ಯಸ್ಥೆ ಇ.ಡಿ. ಹುಗ್ಗಣ್ಣವರ, ಸಂಪನ್ಮೂಲ ವ್ಯಕ್ತಿಗಳಾದ ಕವಿತಾ ಬೇಲೇರಿ, ಶಶಿಧರ ಚಳಗೇರಿ ಸೇರಿದಂತೆ ಎಲ್ಲ ಸಂಪನ್ಮೂಲ ವ್ಯಕ್ತಿಗಳು ಉಪಸ್ಥಿತರಿದ್ದರು.

ಅತಿಥಿಗಳಾಗಿ ಆಗಮಿಸಿದ್ದ ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವ್ಹಿ. ಶೆಟ್ಟೆಪ್ಪನವರ ಮಾತನಾಡಿ, ಇನ್ನರ್‌ವ್ಹೀಲ್ ಕ್ಲಬ್ ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಬೆಂಬಲ ನೀಡುವ ಮೂಲಕ ಶೈಕ್ಷಣಿಕ ಅಭಿವೃದ್ಧಿಗೆ ಒತ್ತು ನೀಡಿದೆ. ಸರ್ಕಾರಿ ಶಾಲೆಗಳನ್ನು ದತ್ತು ಪಡೆದು ಮಕ್ಕಳ ಕಲಿಕೆಗೆ ಸಾಮಗ್ರಿಗಳನ್ನು ಪೂರೈಸಿ ಪ್ರೇರಣೆ ನೀಡುತ್ತಿದೆ ಎಂದರು.

## ಲಕ್ಕುಂಡಿಯಲ್ಲಿ ಈದ್ ಮಿಲಾದ್ ಆಚರಣೆ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಪ್ರವಾದಿ ಮುಹಮ್ಮದ ಪೈಗಂಬರ ಜಯಂತಿ ಅಂಗವಾಗಿ ಇಲ್ಲಿಯ ಅಂಜುಮನ್-ಎ-ಇಸ್ಲಾಮ್ ಕಮಿಟಿಯ ಆಶ್ರಯದಲ್ಲಿ ಈದ್ ಮಿಲಾದ್ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಯಿತು.

ಪಾಪನಾಶಿ ರಸ್ತೆಯಲ್ಲಿರುವ ಮಾಬುಸುಬಾನಿ ದರ್ಗಾದಲ್ಲಿ ಪ್ರಾರ್ಥನೆ ಸಲ್ಲಿಸಿದ ನಂತರ ಸಲೀಮ್ ಹಾಗೂ ಯಹ್ಯಾ ಹಾಪೀಜ್ ಅವರು ಬೈಕ್ ಮೆರವಣಿಗೆಗೆ ಚಾಲನೆ ನೀಡಿದರು. ಗ್ರಾಮದ ಪ್ರಮುಖ ಬೀದಿಯಲ್ಲಿ ಮೆರವಣಿಗೆ ನಡೆಸಿದ ಮುಸ್ಲಿಂ ಬಾಂಧವರು ಮುಹಮ್ಮದ ಪೈಗಂಬರರ ಕುರಿತು ಘೋಷಣೆಗಳನ್ನು ಕೂಗಿದರು. ಮೆರವಣಿಗೆಯು ಹಿರೇಮಸೂತಿಯಲ್ಲಿ ಮುಕ್ತಾಯವಾಯಿತು.

ನಂತರ ನಡೆದ ಕಾರ್ಯಕ್ರಮದಲ್ಲಿ ಮುಹಮ್ಮದ ಪೈಗಂಬರರ ಜೀವನ ಚರಿತ್ರೆಯ ಕುರಿತು ಸಲೀಮ್ ಹಾಪೀಜ್ ಪ್ರವಚನ ನೀಡಿದರು. ಗದಗ ಗ್ರಾಮೀಣ ಸಿ.ಪಿ.ಐ ಸಿದ್ರಾಮೇಶ ಗಡೇದ ಮಾತನಾಡಿದರು.

ಅಂಜುಮನ್ ಇಸ್ಲಾಂ ಕಮಿಟಿಯ ಅಧ್ಯಕ್ಷ ನಜೀರಅಹ್ಮದ ಕಿರೀಟಗೇರಿ, ದಾದಾಸಾಬ ಕೊರ್ಲಹಳ್ಳಿ, ಖಾಜಿಸಾಬ ಮುಲ್ಲಾ, ಜಾವೇದ್ ಯರಗುಡಿ, ಮಹ್ಮದಸಾಬ ನದಾಫ್, ಕಾಶಿಂಸಾಬ ತಹಸೀಲ್ದಾರ, ಅಬ್ದುಲ್ ರಸೂಲಸಾಬ ದೌಲತ್ತರ, ಇಮ್ರಾನ್ ಕೊರ್ಲಹಳ್ಳಿ, ಧರಿಯಾಸಾಬ ನದಾಫ್, ಕಾಶಿಂಸಾಬ ನದಾಫ್, ಮುಸ್ತಾಕ್ ಹಾದಿಮನಿ ಇತರರು ಹಾಜರಿದ್ದರು. ಕಾರ್ಯಕ್ರಮದ ನಂತರ ಅನ್ನ ಸಂತರ್ಪಣೆ ನಡೆಯಿತು.

## ಉತ್ತಮ ಶಿಕ್ಷಕ ಶೆಟ್ಟಿನಾಯಕರರಿಗೆ ಅಭಿನಂದನೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಬಾಲಕಿಯರ ಸರಕಾರಿ ಪ್ರೌಢಶಾಲೆಯ ಕನ್ನಡ ಭಾಷಾ ಶಿಕ್ಷಕ ಶಂಭುಲಿಂಗಪ್ಪ ಹನುಮಪ್ಪ ಶೆಟ್ಟಿನಾಯಕ ಅವರು ಗದಗ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಯನ್ನು ಪಡೆದುಕೊಂಡಿದ್ದಾರೆ. ಗದಗ ನಗರದಲ್ಲಿ ನಡೆದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಶೆಟ್ಟಿನಾಯಕ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಎಸ್.ಡಿ.ಎಂ.ಸಿ ಪದಾಧಿಕಾರಿಗಳು, ಮುಖ್ಯೋಪಾಧ್ಯಾಯರು, ಶಿಕ್ಷಕರು, ಗ್ರಾಮಸ್ಥರು ಶೆಟ್ಟಿನಾಯಕರನ್ನು ಅಭಿನಂದಿಸಿದ್ದಾರೆ.






ಗದಗ ಈದ್ ಮಿಲಾದ್ ಸಮಿತಿ ಸದಸ್ಯರು ಗದುಗಿನ ಆಯ್‌ಎಮ್‌ಎ ಸಹಯೋಗದೊಂದಿಗೆ ರಕ್ತದಾನ ಶಿಬಿರ ಆಯೋಜಿಸಿದ್ದರು. ಹಬ್ಬದ ದಿನದಂದು ಸಮಿತಿ ಸದಸ್ಯರು ಇತರರಿರೂ ರಕ್ತದಾನ ಮಾಡಲು ಪ್ರೇರೇಪಿಸಿದರು. ಶುಕ್ರವಾರ ಒಟ್ಟು 23 ಯೂನಿಟ್ ರಕ್ತ ಸಂಗ್ರಹವಾಗಿದೆ ಎಂದು ವೈದ್ಯ ಪ್ಯಾರಾಲಿ ನೂರಾಲಿ ತಿಳಿಸಿದರು. ಬರುವ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ರಕ್ತದಾನ ಶಿಬಿರಗಳನ್ನು ಮತ್ತು ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸುವ ಉದ್ದೇಶವಿದೆ ಎಂದು ಈದ್ ಮಿಲಾದ್ ಸಮಿತಿ ಸದಸ್ಯರು ತಿಳಿಸಿದರು.

### ಚಂದ್ರಮೌಳೀಶ್ವರ ಶಿವಾಚಾರ್ಯ ಮಹಾಸ್ವಾಮಿಗಳ 89ನೇ ಜನ್ಮ ದಿನಾಚರಣೆ

# ತೆಗ್ಗಿನಮಠದಂತಹ ಮಠಗಳು ವಿರಳ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಸಮಾಜದಲ್ಲಿ ನಾವು ಮಾಡುವ ಉತ್ತಮ ಕಾರ್ಯಗಳಿಂದ ನಮ್ಮ ಹೆಸರು ಅಜರಾಮರವಾಗಿ ಉಳಿಯಸಲು ಸಾಧ್ಯವಾಗುತ್ತದೆ. ಮರಣದ ನಂತರವೂ ಚಂದ್ರಮೌಳೀಶ್ವರ ಶಿವಾಚಾರ್ಯರ ಕಾರ್ಯಗಳು ಜೀವಂತಿಕೆಯನ್ನು ಪಡೆದುಕೊಂಡಿವೆ ಎಂದು ಮಾನಿಹಳ್ಳಿ ಪುರವರ್ಗ ಮಠದ ಮಳೆಯೋಗೀಶ್ವರ ಶಿವಾಚಾರ್ಯ ಸ್ವಾಮಿಗಳು ತಿಳಿಸಿದರು.

ಹರಪನಹಳ್ಳಿ ಪಟ್ಟಣದ ತೆಗ್ಗಿನ ಸಂಸ್ಥಾನದ ಟಿ.ಎಂ. ಚಂದ್ರಶೇಖರಯ್ಯ ಸಭಾಂಗಣದಲ್ಲಿ ಬುಧವಾರ ಚಂದ್ರಮೌಳೀಶ್ವರ ಶಿವಾಚಾರ್ಯ ಮಹಾಸ್ವಾಮಿಗಳ 89ನೇ ಜನ್ಮ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ತೆಗ್ಗಿನ ಮಠದಂತಹ ಮಠಗಳು ನಾಡಿನಲ್ಲಿ ಬೆರಳಣಿಕೆಯಷ್ಟಿದ್ದು, ಸಮಾಜದಲ್ಲಿ ಶಿಕ್ಷಣ ಕ್ರಾಂತಿ ಹಾಗೂ ಸಮಾಜ ಸೇವೆ ಮಾಡುವುದರಲ್ಲಿ ತೆಗ್ಗಿನ ಮಠ ಸಂಸ್ಥನವು ನಾಡಿನಲ್ಲಿ ಮೊದಲ ಸಾಲಿನಲ್ಲಿದೆ. ಈ ಸಂಸ್ಥೆಯ ಏಳ್ಗೆಯಾಗಲು ಟಿ.ಎಂ. ಚಂದ್ರಶೇಖರಯ್ಯನವರ ಪಾತ್ರ ಅಮೂಲ್ಯವಾದದ್ದು. ಅವರು ಅಕ್ಬರ್‌ನ ಆಸ್ಥಾನದಲ್ಲಿ ಇದ್ದ ಚಾಣಾಕ್ಷ ಮಂತ್ರಿ ಬೀರಬಲ್ಲನಂತಹ ಚತುರತೆಯುಳ್ಳವರಾಗಿದ್ದಾರೆ ಎಂದರು.

ತೆಗ್ಗಿನ ಮಠ ಸಂಸ್ಥಾನದ ಪೀಠಾಧಿಪತಿ ವರಸಧ್ಯೋಜಾತ ಸ್ವಾಮೀಜಿ ಮಾತನಾಡಿ, ನಾಡಿನಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ವೀರಶೈವ ಮಠ-ಮಾನ್ಯಗಳು ಸಾಕಷ್ಟು ಉತ್ತಮ ಕಾರ್ಯ ಮಾಡಿಕೊಂಡು ಬರುತ್ತಿವೆ. ಚಂದ್ರಮೌಳೀಶ್ವರರು ಮಧ್ಯ ಕರ್ನಾಕದಲ್ಲಿ ಸಾಕಷ್ಟು ವಿದ್ಯಾಕೇಂದ್ರಗಳನ್ನು ತೆರೆದು ಮನೆ ಮನೆಗಳಲ್ಲಿ ಬೆಳಗುವ ದೀಪವಾಗಿದ್ದಾರೆ ಎಂದರು.

ತೆಗ್ಗಿನ ಮಠ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಟಿ.ಎಂ. ಚಂದ್ರಶೇಖರಯ್ಯ ಮಾತನಾಡಿ, ಗುರುಗಳು ಹಾಕಿಕೊಟ್ಟ ಸನ್ಮಾರ್ಗದಲ್ಲಿ ನಾವು ಸಾಗಬೇಕಿದೆ. ಬಡ ಹಿಂದುಳಿದ ತಾಲೂಕೆಂಬ ಕಪ್ಪು ಚುಕ್ಕಿಯನ್ನು ಅಳಿಸಿದ ಕೀರ್ತಿ ಚಂದ್ರಮೌಳೀಶ್ವರರಿಗೆ ಸಲ್ಲುತ್ತದೆ. ಅವರು ನಡೆದಾಡಿದ ಸ್ಥಳಗಳು ಇಂದು ಪುಣ್ಯ ಕ್ಷೇತ್ರಗಳಾಗಿ ಪರಿವರ್ತನೆಗೊಂಡಿವೆ ಎಂದರು.

ವೀರಶೈವ ಮಹಾಸಭಾದ ತಾಲೂಕು ಅಧ್ಯಕ್ಷ ಎಂ.ರಾಜಣ್ಣ, ನಿವೃತ್ತ ಇಓ ಹೆಚ್.ಎಂ. ಕೊಟ್ರಯ್ಯ ಮಠ ಬೆಳೆದು ಬಂದ ಹಾದಿಯನ್ನು ಸ್ಮರಿಸಿದರು. ಈ ವೇಳೆ ಪ್ರಶಾಂತ ಸಾಗರ ಶಿವಾಚಾರ್ಯ ಸ್ವಾಮೀಜಿ ಹಿರೇಮಠ ಕೂಡ್ಲಿಗಿ, ಟಿ.ಎಂ. ಚನ್ನವೀರಸ್ವಾಮಿ, ಟಿ.ಎಂ. ಪ್ರತೀಕ್, ಟಿ.ಎಂ. ಗುರುಬಸವರಾಜ್, ಟಿ.ಎಂ. ರಾಜಶೇಖರ್, ಟಿ.ಎಂ. ನಾಗರಾಜ್, ಟಿ.ಎಂ. ವೀರೇಶ್, ಎ. ವೀರಣ್ಣ, ಕರಿಬಸಪ್ಪ, ಪ್ರಾಚಾರ್ಯ ಸಿ.ಎಂ. ವೀರೇಶ್, ನಾಗೇಂದ್ರ, ಚರಣ್, ಅರುಣ್ ಕುಮಾರ್ ಹಾಗೂ ಸಿಬ್ಬಂದಿ ವರ್ಗದವರಿದ್ದರು.

# ಶ್ರೇಷ್ಠ ಶಿಕ್ಷಕರಾಗಿ ಸುಭದ್ರ ರಾಷ್ಟ್ರ ನಿರ್ಮಿಸೋಣ

▸▸ ಮೊದಲನೇ ಪುಟದಿಂದ

(ಅಭಿವೃದ್ಧಿ) ಮಂಗಳಾ ತಾಪಸ್ಕರ್, ಗದಗ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ, ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ಗದಗ ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವಿ. ಶೆಟ್ಟೆಪ್ಪನವರ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು, ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರು, ವಿವಿಧ ಶಿಕ್ಷಕರ ಸಂಘಗಳ ಅಧ್ಯಕ್ಷರು, ಪದಾಧಿಕಾರಿಗಳು, ಸದಸ್ಯರು ಉಪಸ್ಥಿತರಿದ್ದರು.

## ಡಿಸಿಸಿ ಬ್ಯಾಂಕ್ ಚುನಾವಣೆಗೆ ದಿನಗಣನೆ: ಈ ಬಾರಿ ಲಿಂಗಾಯತರನ್ನೇ ಆಯ್ಕೆ ಮಾಡುತ್ತೇವೆ!

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಡಿಸಿಸಿ ಬ್ಯಾಂಕ್ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ಲಿಂಗಾಯತರನ್ನೇ ಆಯ್ಕೆ ಮಾಡುತ್ತೇವೆ ಎಂದು ಬಾಲಚಂದ್ರ ಜಾರಕಿಹೊಳಿ ಹೇಳಿದ್ದಾರೆ.

ಹುಕ್ಕೇರಿ ಪಟ್ಟಣದಲ್ಲಿ ಮಾತನಾಡಿದ ಅವರು, ಈ ಬಾರಿ ಡಿಸಿಸಿ ಬ್ಯಾಂಕ್ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಲಿಂಗಾಯತರನ್ನೇ ಆಯ್ಕೆ ಮಾಡುತ್ತೇವೆ. ಬೆಳಗಾವಿ ಡಿಸಿಸಿ ಚುನಾವಣೆಯಲ್ಲಿ 16 ರಲ್ಲಿ 12 ಸ್ಥಾನ ಗೆದ್ದೇ ಗೆಲ್ಲುತ್ತೇವೆ. ಮುಂದಿನ ಡಿಸಿಸಿ ಬ್ಯಾಂಕ್ ಅಧ್ಯಕ್ಷರು ನಮ್ಮ ಗುಂಪಿನವರೇ ಆಗುತ್ತಾರೆ ಎಂದು ಭರವಸೆ ವ್ಯಕ್ತಪಡಿಸಿದರು.

### ಬಸವ ಯೋಗ ಮಹಾವಿದ್ಯಾಲಯದಲ್ಲಿ ನಡೆದ ಶಿಕ್ಷಕರ ದಿನಾಚರಣೆಯಲ್ಲಿ ಎಂ.ಕೆ. ಬಂಡಿಹಾಳ ಅಭಿಮತ

# ಶಿಕ್ಷಕರು ಸಶಕ್ತ ರಾಷ್ಟ್ರ ನಿರ್ಮಾಪಕರು

■ವಿಜಯಸಾಕ್ಷಿ ಸುದ್ದಿ, ಗದಗ

ಸಾಮಾನ್ಯವಾಗಿ ವಿದ್ಯಾರ್ಥಿಗಳಲ್ಲಿ ಕಲಿಕಾ ಗುಣಾಂಶ ಇದ್ದೇ ಇರುತ್ತದೆ. ಶಿಕ್ಷಕರಾದವರು ವಿದ್ಯಾರ್ಥಿಗಳಲ್ಲಿ ಕಲಿಕಾ ಗುಣಾಂಶವನ್ನು ಹೆಚ್ಚಿಸಿ ಅವರಿಗೆ ವಿದ್ಯಾಭ್ಯಾಸದ ಜೊತೆಗೆ ಮಾನವೀಯ ಮೌಲ್ಯ ಅರಿಯಲು ಮತ್ತು ರಾಷ್ಟ್ರಾಭಿಮಾನ ಬೆಳೆಯಲು ಪೂರಕವಾದ ಜ್ಞಾನ ನೀಡಿದರೆ ವಿದ್ಯಾರ್ಥಿಗಳು ಪ್ರಬುದ್ಧರಾದ ಮೇಲೆ ಸಮಾಜ, ರಾಷ್ಟ್ರಗಳ ಅಭಿವೃದ್ಧಿಗಾಗಿ ಶ್ರಮಿಸುತ್ತಾರೆ. ಇದರಿಂದ ಸುಂದರ, ಸದೃಢ ರಾಷ್ಟ್ರ ನಿರ್ಮಾಣಗೊಳ್ಳಲು ಸಾಧ್ಯವಾಗುತ್ತದೆ. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳಲ್ಲಿ ಕಲಿಕಾ ಆಸಕ್ತಿ ಹೆಚ್ಚಿಸುವ ಶಿಕ್ಷಕರು ಸಶಕ್ತ ರಾಷ್ಟ್ರ ನಿರ್ಮಾಪಕರು ಎಂದು ಬಸವೇಶ್ವರ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಎಂ.ಕೆ. ಬಂಡಿಹಾಳ ತಿಳಿಸಿದರು.



ಎಸ್.ವಾಯ್.ಬಿ.ಎಂ.ಎಸ್ ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಗದಗ ವತಿಯಿಂದ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ಜರುಗಿದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಇತ್ತೀಚೆಗೆ ನಿವೃತ್ತರಾದ ಬಸವೇಶ್ವರ ಹಿರಿಯ ಪ್ರಾಥಮಿಕ ಶಾಲಾ ಶಿಕ್ಷಕರಾಗಿದ್ದ ಎಂ.ಎಸ್. ಚಳಗೇರಿ ಗುರುಗಳನ್ನು ಮತ್ತು ಯೋಗ ಪಾಠಶಾಲೆಗೆ ಯೋಗಾಭ್ಯಾಸಕ್ಕೆ ಅನುಕೂಲವಾಗುವ 25 ಯೋಗ ಮ್ಯಾಟ್ (ಜಮಖಾನೆ)ಗಳನ್ನು ದೇಣಿಗೆ ನೀಡಿದ ಗಿರಿಜಕ್ಕ ನಾಲತ್ವಾಡಮಠ ಇವರನ್ನು ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿದ ಎಂ.ಎಸ್. ಚಳಗೇರಿ ಗುರುಗಳು ಮಾತನಾಡಿ, ನಾವು ಮಕ್ಕಳಿಗೆ ಅಕ್ಷರ ಕಲಿಸುವ ಜೊತೆಗೆ ಸಾಮರ್ಥ್ಯ, ನಡಾವಳಿಕೆ, ಚಾರಿತ್ರ್ಯ ಶಿಸ್ತು, ಶಿಕ್ಷಣ (ಜ್ಞಾನ) ಗುಣಾಂಶಗಳನ್ನು ಬೆಳೆಸಿಕೊಂಡರೆ ಆದರ್ಶ ಶಿಕ್ಷಕರು ನಾವಾಗುತ್ತೇವೆ, ಸಮಾಜ ನಮ್ಮನ್ನು ಗೌರವಿಸುತ್ತದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಮಾತನಾಡಿ, ಶಿಕ್ಷಕರಾದವರು ಕೇವಲ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಕರಾಗಿರದೆ ಸಮಾಜದಲ್ಲಿರುವ ವಿದ್ಯಾರ್ಥಿ ಪಾಲಕರಿಗೂ ಶಿಕ್ಷಕರಾಗಿ ಕಾರ್ಯನಿರ್ವಹಿಸಿದರೆ ಬಾಲಕ, ಪಾಲಕ, ಶಿಕ್ಷಕ ಇವರಲ್ಲಿರುವ ಅನೇಕ ಸವಾಲುಗಳು ದೂರಾಗುವವೆಂದು ಡಾ. ಸರ್ವಪಲ್ಲಿ ರಾಧಾಕೃಷ್ಣನ್‌ರು ವರ್ಷಕ್ಕೊಮ್ಮೆಯಾದರೂ ಶಿಕ್ಷಕರನ್ನು ಗೌರವಿಸಲು ಶಿಕ್ಷಕರ ದಿನಾಚರಣೆ ದಯಪಾಲಿಸಿರುವದು ನಮ್ಮೆಲ್ಲರ ಸೌಭಾಗ್ಯವಾಗಿದೆ. ಅವರ ಆದರ್ಶಗಳನ್ನು ರೂಢಿಸಿಕೊಳ್ಳಬೇಕೆಂದು ಸೂಚಿಸಿದರು.

ವೇದಿಕೆಯಲ್ಲಿ ಉಪಸ್ಥಿತರಿದ್ದ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರ 2023-24ನೇ ಸಾಲಿನ ಯೋಗ ಸರ್ಟಿಫಿಕೇಟ್ ಮತ್ತು ಪಿ.ಜಿ ಡಿಪ್ಲೋಮಾ ಪದವಿ ಪಡೆದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ವಿತರಿಸಿದರು. ಬಿ.ಬಿ. ತೋಟಗೇರ ಶಿಕ್ಷಕರ ದಿನಾಚರಣೆ ಕುರಿತು ಅನಿಸಿಕೆ ತಿಳಿಸಿದರು. ಕಾರ್ಯಕ್ರಮದಲ್ಲಿ ಯೋಗ ಸಾಧಕರು, ಯೋಗ ಕೋರ್ಸ್ ವಿದ್ಯಾರ್ಥಿಗಳು, ಅಭಿಮಾನಿಗಳು ಪಾಲ್ಗೊಂಡಿದ್ದರು.

ಪ್ರಾರಂಭದಲ್ಲಿ ಸುನಂದಾ ಜ್ಯಾನೋಪಂತರ ಪ್ರಾರ್ಥನೆ ಹೇಳಿದರು. ವಿ.ಎಂ. ಮುಂದಿನಮನಿ ಸ್ವಾಗತಿಸಿದರು. ವಿಜಯಾ ಚನ್ನಶೆಟ್ಟಿ ಕಾರ್ಯಕ್ರಮ ನಿರೂಪಿಸಿದರು. ಡಾ. ಎಂ.ವಿ. ಐಹೊಳ್ಳಿ ವಂದಿಸಿದರು. ರವಿ ಹುಡೇದ ಉಪಹಾರ ವಿತರಿಸಿದರು.

# ಕ್ರೀಡೆಗಳಿಂದ ವಿದ್ಯಾರ್ಥಿಗಳಲ್ಲಿ ಸದೃಢತೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕ್ರೀಡಾ ಸಾಧನೆಗೆ ಸತತ ಪ್ರಯತ್ನ ಹಾಗೂ ಗುರಿ ಅವಶ್ಯಕ ಎಂದು ಸರಕಾರಿ ಪ್ರೌಢಶಾಲೆ (ಆರ್.ಎಂ.ಎಸ್.ಎ)ಯ ದೈಹಿಕ ಶಿಕ್ಷಕ ವಿ.ಟಿ. ಅಂಗಡಿ ಹೇಳಿದರು.

ಅವರು ಪಟ್ಟಣದ ಪ್ರೌಢಶಾಲಾ ವಲಯ ಮಟ್ಟದ ಕ್ರೀಡಾಕೂಟದಲ್ಲಿ ಸಾಧನೆಗೈದ ವಿದ್ಯಾರ್ಥಿಗಳನ್ನು ಗೌರವಿಸಿ ಮಾತನಾಡಿದರು.

ದೈಹಿಕ ಹಾಗೂ ಮಾನಸಿಕ ಸದೃಢತೆಗೆ ಕ್ರೀಡಾಕೂಟ ಸಹಕಾರಿಯಾಗಿದ್ದು, ಪ್ರಾಥಮಿಕ ಹಾಗೂ ಪ್ರೌಢ ಹಂತದಲ್ಲಿ ಮಕ್ಕಳು ಪಠ್ಯದ ಜೊತೆಯಲ್ಲಿ ಪಠ್ಯೇತರ ಚಟುವಟಿಕೆಗಳಲ್ಲಿಯೂ ಆಸಕ್ತಿಯಿಂದ ಭಾಗವಹಿಸಿದಲ್ಲಿ ದೇಶದ ಉತ್ತಮ ಪ್ರಜೆಗಳಾಗಿ ಹೊರ ಹೊಮ್ಮಲು ಸಾಧ್ಯವಾಗುತ್ತದೆ ಎಂದರು.

ಗಣೇಶ ಲಮಾಣಿ, ಅಂಜುಮಾ ಸಂದಿಗವಾಡ, ತನು ಹಿರೇಮಠ, ಪ್ರದೀಪ ಗೌಡನಾಯ್ಕರ, ರೋಹೀತ ಪೂಜಾರ, ಯಶವಂತ ಲಮಾಣಿ ವಯಕ್ತಿಕ ಪ್ರಶಸ್ತಿಗಳನ್ನು ಪಡೆದುಕೊಂಡಿದ್ದರೆ, ಬಾಲಕರ ಕಬಡ್ಡಿ ಪ್ರಥಮ, ಬಾಲಕಿಯರ ಕಬಡ್ಡಿ ದ್ವಿತೀಯ ಸ್ಥಾನವನ್ನು ಗಳಿಸಿದೆ.

ಕಾರ್ಯಕ್ರಮದಲ್ಲಿ ಶಾಲಾ ಪ್ರಧಾನ ಗುರು ಎಸ್.ಎಚ್. ಪೂಜಾರ, ಎಲ್.ಡಿ. ರಾಠೋಡ, ನೂರಹಮದ ನದಾಫ್, ಎಸ್.ವಿ. ತಿಮ್ಮಾಪೂರ, ಜಿ.ಆರ್. ಕುಂದರಗಿ, ಗೀತಾ ಪಾಟೀಲ, ಬಸವರಾಜ ಗೌರಿಮನಿ, ಮಾಹಾಂತೇಶ ಕೆಂಚನಾಯ್ಕರ ಇದ್ದರು.

### ಜಿಲ್ಲಾಡಳಿತ ಭವನ ಮುಂಭಾಗದಲ್ಲಿ ಅರೆಬೆತ್ತಲೆ ಪ್ರತಿಭಟನೆ

# ರಸ್ತೆ ತಡೆದ ಬಗರ್‌ಹುಕುಂ ರೈತರು

■ವಿಜಯಸಾಕ್ಷಿ ಸುದ್ದಿ, ಗದಗ

ಬಗರ್‌ಹುಕುಂ ಸಾಗುವಳಿದಾರರು, ಅರಣ್ಯ ಅವಲಂಬಿತ ರೈತರಿಗೆ ಹಕ್ಕುಪತ್ರ ನೀಡುವಂತೆ ಮತ್ತು ನರಸಾಪುರ ಕೈಗಾರಿಕಾ ಕೆಐಡಿಬಿ ಭೂಸ್ವಾಧೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸುವಂತೆ ಒತ್ತಾಯಿಸಿ ಉತ್ತರ ಕರ್ನಾಟಕ ಮಹಾಸಭಾ ವತಿಯಿಂದ ಜಿಲ್ಲಾಡಳಿತ ಭವನ ಮುಂಭಾಗದಲ್ಲಿ ನಡೆಯುತ್ತಿರುವ ಪ್ರತಿಭಟನೆ ಬುಧವಾರ 17ನೇ ದಿನಕ್ಕೆ ಕಾಲಿಟ್ಟಿತು.



ಈ ಸಂದರ್ಭದಲ್ಲಿ ಪ್ರತಿಭಟನಾಕಾರರು ಅರೆಬೆತ್ತಲೆ ಧರಣಿ ನಡೆಸಿ ಗದಗ-ಹುಬ್ಬಳ್ಳಿ ಮುಖ್ಯ ರಸ್ತೆಯನ್ನು ತಡೆದು ಆಕ್ರೋಶ ವ್ಯಕ್ತಪಡಿಸಿದರು. ಕಳೆದ ಮೂರು ವಾರಗಳಿಂದ ನಿರಂತರವಾಗಿ ಪ್ರತಿಭಟನೆ ನಡೆಯುತ್ತಿದ್ದರೂ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಯಾವುದೇ ಸ್ಪಂದನೆ ನೀಡಿಲ್ಲ ಎಂದು ಆರೋಪಿಸಿದರು. ರಸ್ತೆ ತಡೆ ಪ್ರತಿಭಟನೆಯಿಂದ ಕೆಲ ಗಂಟೆಗಳ ಕಾಲ ಸಂಚಾರ ಅಸ್ತವ್ಯಸ್ತಗೊಂಡಿತು. ಹುಬ್ಬಳ್ಳಿಯಿಂದ ಗದಗ ಬರುವ ಕೆಲ ಬಸ್‌ಗಳು ಜಿಲ್ಲಾಡಳಿತ ಭವನದ ಮುಂಭಾಗದಲ್ಲೇ ಪ್ರಯಾಣಿಕರನ್ನು ಇಳಿಸಿ ಹುಬ್ಬಳ್ಳಿಗೆ ಮರಳಿದವು.

ಉತ್ತರ ಕರ್ನಾಟಕ ಮಹಾಸಭಾ ಅಧ್ಯಕ್ಷ ರವಿಕಾಂತ ಅಂಗಡಿ ಮಾತನಾಡಿ, ಜಿಲ್ಲೆಯ ಅರಣ್ಯ ಅವಲಂಬಿತ ಬಗರ್ ಹುಕುಂ ಸಾಗುವಳಿದಾರರಿಗೆ ಹಕ್ಕುಪತ್ರ ನೀಡುವಲ್ಲಿ ದಾಖಲೆಗಳನ್ನು ಸರಿಯಾಗಿ ಪರಿಶೀಲಿಸದೇ ತಿರಸ್ಕರಿಸಲಾಗಿದೆ. ತಿರಸ್ಕೃತ ಅರ್ಜಿಗಳ ಮರುಪರಿಶೀಲನೆಗೆ ಸರ್ಕಾರ ಭರವಸೆ ನೀಡಿದ್ದರೂ ಇದುವರೆಗೆ ಯಾವುದೇ ಕ್ರಮ ಜರುಗಿಲ್ಲ. ಹೊಸ ಅರ್ಜಿ ಸ್ವೀಕಾರಕ್ಕೆ ಅನುಮತಿ ದೊರೆತಿದ್ದರೂ ಅರಣ್ಯ ಅವಲಂಬಿತ ರೈತರಿಂದ ಅರ್ಜಿಗಳನ್ನು ಸ್ವೀಕರಿಸದೇ ರೈತರಿಗೆ ಅನ್ಯಾಯ ಮಾಡಲಾಗಿದೆ. ತಕ್ಷಣ ಅರ್ಜಿಗಳನ್ನು ಸ್ವೀಕರಿಸಿ ಹಕ್ಕುಪತ್ರ ನೀಡಬೇಕು ಎಂದರು.

ಸತತ 17 ದಿನಗಳಿಂದ ಬಗರ್‌ಹುಕುಂ ಸಾಗುವಳಿದಾರರು, ಅರಣ್ಯ ಅವಲಂಬಿತ ರೈತರಿಗೆ ಹಕ್ಕುಪತ್ರ ನೀಡುವಂತೆ ಆಗ್ರಹಿಸಿ ಜಿಲ್ಲಾಡಳಿತದ ಎದುರು ಅಹೋರಾತ್ರಿ ನಡೆಸುತ್ತಿದ್ದು,ರಿತ್ತ ಗಮನ ಹರಿಸದ ಜಿಲ್ಲಾಡಳಿತ ಹಾಗೂ ಜನಪ್ರತಿನಿಧಿಗಳ ನಡೆ ಖಂಡಿಸಿ ಜಿಲ್ಲೆಯ ಕಿತ್ತೂರ ರಾಣಿ ಚನ್ನಮ್ಮ ವೃತ್ತದಿಂದ ಜಿಲ್ಲಾಧಿಕಾರಿಗಳ ಕಛೇರಿವರೆಗೂ ರೈತರ ಸಾಮೂಹಿಕ ದೀಡ್ ನಮಸ್ಕಾರ ಹಾಕಲಾಗುವುದು ಎಂದು ಉತ್ತರಕರ್ನಾಟಕ ಮಹಾಸಭಾದ ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ ಹೇಳಿದರು.

ಪ್ರತಿಭಟನೆಯಲ್ಲಿ ಎನ್.ಟಿ. ಪೂಜಾರ, ರಮೇಶ ಮಜ್ಜೂರು, ಶ್ರೀನಿವಾಸ ಶಿರಹಟ್ಟಿ, ಬಸವಣ್ಣೆಪ್ಪ ಚಿಂಚಲಿ, ಚಂಬಣ್ಣ ಚೆನ್ನಪಟ್ಟಣ, ಹನುಮಂತ ಚೆನ್ನಪಟ್ಟಣ, ಖಾದೀರ್ ಸಾಬ್, ಫಿರೋಜ್ ನದಾಫ್, ಮಹಮ್ಮದ ಶಲವಡಿ ಸೇರಿದಂತೆ ಜಿಲ್ಲೆಯ ರೈತರು, ಮಹಿಳೆಯರು ಭಾಗವಹಿಸಿದ್ದರು.

# ಗ್ರಂಥಾಲಯಗಳ ಸದ್ಬಳಕೆ ಮಾಡಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ನರಗುಂದ

ಗ್ರಾಮೀಣ ಪ್ರದೇಶದಲ್ಲಿ ಜ್ಞಾನ ಸಂಪಾದನೆಗೆ ಅತ್ಯಂತ ಸರಳ ಮತ್ತು ಸುಲಭವಾದ ಮಾರ್ಗಗಳನ್ನು ಗ್ರಂಥಾಲಯ ಒದಗಿಸುತ್ತದೆ. ಯುವಕರು, ಗ್ರಾಮಸ್ಥರು ಗ್ರಂಥಾಲಯವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಕೆ. ಇನಾಮದಾರ ಹೇಳಿದರು.

ತಾಲೂಕಿನ ಬೆನಕನಕೊಪ್ಪ ಗ್ರಾ.ಪಂ ವ್ಯಾಪ್ತಿಯ ಸಂಕದಾಳ ಗ್ರಾಮದಲ್ಲಿ ನೂತನ ಉಪ ಗ್ರಂಥಾಲಯವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಶಾಲೆಯಲ್ಲಿ ಗ್ರಂಥಾಲಯ ತೆರೆದಿರುವುದರಿಂದ ವಿದ್ಯಾರ್ಥಿಗಳಿಗೆ ಉಪಯುಕ್ತವಾಗಿದೆ. ವಿದ್ಯಾರ್ಥಿಗಳು ಪಠ್ಯದೊಂದಿಗೆ ಇತರೆ ಪುಸ್ತಕಗಳನ್ನು ಓದುವುದಕ್ಕೆ ಸಹಕಾರಿಯಾಗಿದೆ. ಜತೆ-ಗೆ ದಿನಪತ್ರಿಕೆ, ಸ್ಪರ್ಧಾತ್ಮಕ ಪರೀಕ್ಷೆಗಳ ಬಗೆಗಿನ ಪುಸ್ತಕ ಓದುವ, ಓದಿದ್ದನ್ನು ಮನನ ಮಾಡಿಕೊಳ್ಳುವುದನ್ನು ರೂಢಿಸಿಕೊಂಡಲ್ಲಿ ಸಾಧನೆ ಮಾಡಬಹುದಾಗಿದೆ ಎಂದರು.

ಈ ವೇಳೆ ಅಂಗನವಾಡಿ ಕಟ್ಟಡ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಗ್ರಾಮಸ್ಥರು ನೂತನ ಗ್ರಂಥಾಲಯಕ್ಕೆ ಜಾಗವಿದ್ದು, ಸ್ವಂತ ಕಟ್ಟಡ ನಿರ್ಮಿಸಿಕೊಡಲು ಮನವಿ ಮಾಡಿದರು. ಪ್ರಸಕ್ತ ವರ್ಷದಲ್ಲಿ ತಾ.ಪಂ ಅನುದಾನದ ಕ್ರಿಯಾಯೋಜನೆ ಈಗಾಗಲೇ ಅನುಮೋದನೆಯಾಗಿದೆ. ಮುಂದಿನ ವರ್ಷದ ಕ್ರಿಯಾಯೋಜನೆಯಲ್ಲಿ ಇಟ್ಟು ಕಟ್ಟಡ ನಿರ್ಮಾಣ ಮಾಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷರಾದ ಶಾಂತವ್ವ ಕೊವಿ, ಉಪಾಧ್ಯಕ್ಷರಾದ ಪಾರ್ವತೆವ್ವ ಮಾದರ, ಸದಸ್ಯರಾದ ಸಿದ್ದಣ್ಣ ಅಂಗಡಿ, ನಾಗನಗೌಡ ಪೊಲೀಸ್‌ಪಾಟೀಲ, ವೀರಪ್ಪ ನಾಯ್ಕರ್, ಮುಖಂಡರಾದ ಸಿ.ಕೆ. ರಾಚನಗೌಡ್ರ, ಬಸಪ್ಪ ಭೂಮಣ್ಣನವರ, ಸಿದ್ದನಗೌಡ ಚನ್ನಪ್ಪಗೌಡ್ರ, ಪಿಡಿಓ ಎಲ್.ಬಿ. ಕಲ್ಲಾಪೂರ, ಕಾರ್ಯದರ್ಶಿ, ಶರಣಪ್ಪ ಬಾರಕೇರ್, ಪಂಚಾಯತ್ ಸಿಬ್ಬಂದಿಗಳು, ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಇದ್ದರು.

# ಪರಿಸರ ಸ್ನೇಹಿ ಗುರುವಂದನಾ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜೀವ ವಿಮಾ ನಿಗಮ ಕಚೇರಿಯ ಗದಗ ಶಾಖೆ 1ರಲ್ಲಿ ಪರಿಸರ ಸ್ನೇಹಿ ಗುರುವಂದನಾ ಕಾರ್ಯಕ್ರಮ ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ಶಾಖಾ ವ್ಯವಸ್ಥಾಪಕರಾದ ಎಚ್.ಎಮ್. ಭಜಂತ್ರಿ ಮತ್ತು ಎಬಿಎಂ ವಿಕ್ರಮ ಶೀಲವಂತ ಇವರನ್ನು ಸಸಿ ನೀಡುವುದರ ಮೂಲಕ ಸನ್ಮಾನಿಸಲಾಯಿತು. ವಿಮಾ ಪ್ರತಿನಿಧಿಗಳು ಚೈತನ್ಯ ಬಳಗದ ಮೂಲಕ ಬಿ.ಬಿ. ದೇಶಪಾಂಡೆ ಮತ್ತು ಅವರ ಪತ್ನಿ ಭಾರತಿ ದೇಶಪಾಂಡೆಯವರನ್ನು ಶಿಕ್ಷಕರ ದಿನಾಚರಣೆ ನಿಮಿತ್ತ ಸನ್ಮಾನಿಸಲಾಯಿತು.



ಈ ಸಂದರ್ಭದಲ್ಲಿ ಬಿ.ಬಿ. ದೇಶಪಾಂಡೆ ಮಾತನಾಡಿ, ನಮ್ಮ ಜೀವ ವಿಮಾ ನಿಗಮದ ಪ್ರತಿನಿಧಿಗಳು ಪಾಲಿಸಿದಾರರಿಗೆ ಒಂದು ಪಾಲಿಸಿ ಮಾಡಿಸಿದಾಗ ಒಂದು ಸಸಿ ನೀಡಿ ಅದನ್ನು ಬೆಳಸಲು ಪ್ರೇರೇಪಿಸಬೇಕು. ಸಾಗವಾನಿ, ತೇಗ, ನಿಂಬೆ, ಪೇರಲ, ಅಶ್ವಗಂಧ, ತುಳಸಿ, ಶತಾವರಿ, ಕುಪ್ಪೆ, ನುಗ್ಗಿ, ಬೆಟ್ಟದ ನೆಲ್ಲಿಕಾಯಿ, ನೆಲನೆಲ್ಲಿ ಹಾಗೂ ಇನ್ನಿತರ ಆಯುರ್ವೇದ ಸಸ್ಯಗಳನ್ನು ನೀಡಿ ಅವುಗಳ ಬಗ್ಗೆ ಅರಿವು ಮೂಡಿಸಬೇಕೆಂದು ತಿಳಿಸಿದರು.

ಬಿಎಂ ಎಚ್.ಎಂ. ಭಜಂತ್ರಿ ಮಾತನಾಡಿ, ಪರಿಸರ ರಕ್ಷಿಸುವ ಈ ಕಾಯಕದಲ್ಲಿ ಎಲ್ಲರ ಜೊತೆಗೆ ಸಾಥ್ ನೀಡುತ್ತೇವೆ. ಪರಿಸರ ರಕ್ಷಿಸುವ ಕಾರ್ಯಕ್ಕಿಂತ ಯಾವ ಕಾರ್ಯವೂ ಹೆಚ್ಚಿನದಲ್ಲ ಎಂದು ತಿಳಿಸಿದರು. ಚೈತನ್ಯ ಬಳಗದ ಪ್ರತಿನಿಧಿ ಮೌನೇಶ ಭಜಂತ್ರಿ, ಮಂಜುನಾಥ ಸೊಪ್ಪಿನಮಠ, ವಿನಯ ಶಲವಡಿ, ಉಮೇಶ ಅಣ್ಣಿಗೇರಿ, ಕವಿತಾ ಉಪವಾಸಿ, ಶ್ರೀದೇವಿ ಕಮ್ಮಾರ, ಲಕ್ಷ್ಮೀ ಸೋಮಣ್ಣವರ, ರೇಖಾ ಸಾತಣ್ಣವರ, ದಿಲಶಾದ ಸುಂಕದ, ರೇಖಾ ಕುರಿ, ವಿರುಪಾಕ್ಷಪ್ಪ ಮಳ್ಳಿ, ನಾಗರತ್ನಾ ಮಕ್ತಾಲಿ ಹಾಗೂ ಇನ್ನಿತರರು ತಮ್ಮ ಗುರುಗಳ ಅಣತಿಯಂತೆ ಎಲ್ಲ ಪಾಲಿಸಿದಾರರಿಗೆ ಆಯುರ್ವೇದ ಸಸ್ಯ ನೀಡುವುದಾಗಿ ತಿಳಿಸಿದರು.

# ನಿಧನ

## ವಿ.ಎಲ್. ಪೂಜಾರ



**ಲಕ್ಷ್ಮೇಶ್ವರ:** ಪಟ್ಟಣದ ಬ್ರಾಹ್ಮಣ ಸಮಾಜದ ಮುಖಂಡರು, ಹಿರಿಯ ವಕೀಲರಾದ ವಿ.ಎಲ್. ಪೂಜಾರ (69) ಶುಕ್ರವಾರ ನಿಧನ ಹೊಂದಿದರು. ಮೃತರಿಗೆ ಪತ್ನಿ, ಪುತ್ರ ಪುತ್ರಿ ಬಂಧು ಬಳಗವಿದೆ.

**ನೇತ್ರದಾನ:** ವಿ.ಎಲ್. ಪೂಜಾರ ಶುಕ್ರವಾರ ಬೆಳಿಗ್ಗೆ ನಿಧನರಾಗಿದ್ದು, ಅವರ ಧರ್ಮಪತ್ನಿ ಮತ್ತು ಮಗಳು ಹುಬ್ಬಳ್ಳಿಯ ಎಂ.ಎಂ. ಜೋಶಿ ನೇತ್ರಾಲಯದ ಮೂಲಕ ಅವರ ನೇತ್ರಗಳನ್ನು ದಾನ ಮಾಡಲು ಒಪ್ಪಿಗೆ ಸೂಚಿಸಿದರು.

45 ವರ್ಷಗಳ ವಕೀಲ ವೃತ್ತಿಯ ಜತೆಗೆ ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ, ರಾಜಕೀಯದ ಮೂಲಕ ಸಮಾಜಮುಖಿಯಾಗಿದ್ದ ವಿ.ಎಲ್. ಪೂಜಾರ ಇನ್ನೊಬ್ಬರ ಬಾಳಿಗೆ ಬೆಳಕಾಗಿ ಸಾವಿನಲ್ಲೂ ಸಾರ್ಥಕತೆ ಕಂಡರು. ಶನಿವಾರ ಮಧ್ಯಾಹ್ನ ಅಂತ್ಯಕ್ರಿಯೆ ನೆರವೇರಲಿದ್ದು, ಗಣ್ಯರು ಸಂತಾಪ ಸೂಚಿಸಿದ್ದಾರೆ.

### ಎಸ್.ಎಸ್.ಕೆ ತರುಣ ಸಂಘದ ಗಜಾನನೋತ್ಸವ ಕಾರ್ಯಕ್ರಮದಲ್ಲಿ ಮೋಹನಸಾ ಪವಾರ

# ಹಬ್ಬಗಳ ಆಚರಣೆಯಿಂದ ಸಂಘಟನೆಗೆ ಶಕ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ನಾಡಿನ ಹಬ್ಬಗಳ ಆಚರಣೆ ಮಾಡುವದರಿಂದ ಎಲ್ಲರ ಮನಸ್ಸು ಒಂದುಗೂಡಿಸುತ್ತವೆ. ಎಸ್.ಎಸ್.ಕೆ ಸಮಾಜದ ಸಂಘಟನೆಗೆ ಶಕ್ತಿ ತುಂಬುತ್ತದೆ ಎಂದು ಸರಾಫ್ ಉದ್ಯಮಿ ಹಾಗೂ ಎಸ್.ಎಸ್.ಕೆ ತರುಣ ಸಂಘದ 2025-26ನೇ ಸಾಲಿನ ಶ್ರೀ ಗಜಾನನೋತ್ಸವ ಸಮಿತಿಯ ಚೇರಮನ್ ಮೋಹನಸಾ ಪವಾರ ಹೇಳಿದರು.

ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಲಕ್ಷ್ಮಣಸಾ ಸಭಾಗೃಹದಲ್ಲಿ 2025-26ನೇ ಸಾಲಿನ ಶ್ರೀ ಗಜಾನನೋತ್ಸವ ಸಮಿತಿಯಿಂದ ಹಮ್ಮಿಕೊಂಡ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಎಸ್.ಎಸ್.ಕೆ ಸಮಾಜ ಚಿಕ್ಕದಾದರೂ ಸಂಸ್ಕೃತಿಯಲ್ಲಿ ಶ್ರೀಮಂತವಾಗಿದೆ. ಪ್ರತಿಯೊಂದು ಹಬ್ಬಗಳನ್ನು ವಿಶಿಷ್ಟವಾಗಿ ಆಚರಿಸುತ್ತ ನಾಡಿಗೆ ತನ್ನದೇ ಆದ ಕೊಡುಗೆ ನೀಡುತ್ತಾ ಬಂದಿದೆ. ಈ ನಿಟ್ಟನಿಲ್ಲಿ ಇಂದಿನ ಯುವ ಪೀಳಿಗೆ ಹಿರಿಯರು ಹಾಕಿಕೊಟ್ಟ ಮಾರ್ಗದಲ್ಲಿ ಮುನ್ನಡೆಯಬೇಕು. ಮಹಿಳೆಯರ ಪಾತ್ರವೂ ಮುಖ್ಯವಾಗಿರುವದರಿಂದ ಮಕ್ಕಳಿಗೆ ಮನೆಯಿಂದಲೇ ಸಂಸ್ಕಾರ ನೀಡುವ ಕೆಲಸವಾಗಬೇಕು. ಸೆ.4ರಂದು ಮಧ್ಯಾಹ್ನ 1 ಗಂಟೆಗೆ ಜರುಗುವ ಗಣಪತಿ ವಿಸರ್ಜನೆ ಕಾರ್ಯಕ್ರಮದಲ್ಲಿ ಸಮಾಜ ಬಾಂಧವರು ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಪಂಚ ಕಮಿಟಿ ಉಪಾಧ್ಯಕ್ಷ ರಾಜು ಬದಿ, ತರುಣ ಸಂಘದ ಗೌರವ ಕಾರ್ಯದರ್ಶಿ ನಾಗರಾಜ ಖೋಡೆ, ಕಾರ್ಯದರ್ಶಿ ಶ್ರೀಕಾಂತ ಬಾಕಳೆ, ಖಜಾಂಚಿ ಶ್ರೀನಿವಾಸ ಬಾಂಡಗೆ, ಸಂದೀಪ ಕಬಾಡಿ, ನೇಮಚಂದ ಪವಾರ, ಷಣ್ಮುಖ ಪೂಜಾರಿ, ರಾಜು ಮಗಜಿ, ಸುಧೀರ ಕಾಟಿಗರ, ರಾಘು ಬಾಂಡಗೆ, ರಾಮಚಂದ್ರ ಶಿದ್ಲಿಂಗ, ರಾಜು ಖಟವಟೆ, ಮಹಿಳಾ ಮಂಡಳದ ಅಧ್ಯಕ್ಷರಾದ ಉಮಾ ಬೇವಿನಕಟ್ಟಿ, ಗೀತಾಬಾಯಿ ಹಬೀಬ, ಕಸ್ತೂರಿಬಾಯಿ ಬಾಂಡಗೆ ಮುಂತಾದವರು ಉಪಸ್ಥಿತರಿದ್ದರು.

ನಾಗರಾಜ ಖೋಡೆ ಸ್ವಾಗತಿಸಿದರು. ರೇಖಾಬಾಯಿ ಖಟವಟೆ ನಿರೂಪಿಸಿದರು. ಶ್ರೀಕಾಂತ ಬಾಕಳೆ ವಂದಿಸಿದರು.

ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಗದಗ ಎಸ್.ಎಸ್.ಕೆ ಸಮಾಜ ಪಂಚ ಕಮಿಟಿಯ ಅಧ್ಯಕ್ಷ ಫಕೀರಸಾ ಬಾಂಡಗೆ ಉದ್ಘಾಟಿಸಿದರು. ಅನ್ನಸಂತರ್ಪಣೆ ಕಾರ್ಯಕ್ರಮಕ್ಕೆ ಪಂಚ ಕಮಿಟಿ ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ ಚಾಲನೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ತರುಣ ಸಂಘದ ಉಪಾಧ್ಯಕ್ಷ ಮಾಧು ಬದಿ ವಹಿಸಿಕೊಂಡಿದ್ದರು. ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಏಕ್ ಮಿನಿಟ್ ಶೋ, ರಂಗೋಲಿ ಸ್ಪರ್ಧೆ ಮುಂತಾದ ಕಾರ್ಯಕ್ರಮಗಳು ಜರುಗಿದವು.

**ಸೆ.6ರಂದು ಗದಗ ಜಿಲ್ಲಾ ಸರಕಾರಿ ನೌಕರರ ಸಂಘದ ಅಧ್ಯಕ್ಷರಾಗಿ ಅಧಿಕಾರ ಪದಗ್ರಹಣ ಕಾರ್ಯಕ್ರಮದ ನಿಮಿತ್ತ ಲೇಖನ**

# ನೌಕರರ ಮನಗೆದ್ದ ಡಾ.ಬಸವರಾಜ ಬಳ್ಳಾರಿ

ಬಸವರಾಜ ಬಳ್ಳಾರಿಯವರು ಶೈಕ್ಷಣಿಕವಾಗಿ ಹಿಂದುಳಿದ ತಾಲೂಕಾದ ಮುಂಡರಗಿಯ ಹಿರೇವಡ್ಡಟ್ಟಿ ಗ್ರಾಮದ ಹಿಂದುಳಿದ ಸಮುದಾಯದಲ್ಲಿ 1977 ಜುಲೈ 23ರಂದು ಶ್ರಮಿಕ, ಕಾಯಕ ಕೈಲಾಸಯೋಗಿ ಸಾತ್ವಿಕ ತಂದೆ ವೆಂಕಪ್ಪ-ಮಾತೋಶ್ರೀ ನಾಗಮ್ಮನವರ ಪುಣ್ಯ ಗರ್ಭದಲ್ಲಿ ಪ್ರೀತಿಯ ಮಗನಾಗಿ ಜನಿಸಿದರು. ಪ್ರಾಥಮಿಕ ಶಿಕ್ಷಣವನ್ನು ಹುಟ್ಟೂರು ಹಿರೇವಡ್ಡಟ್ಟಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮುಗಿಸಿದರು. ಪ್ರೌಢಶಾಲಾ ಅಭ್ಯಾಸವನ್ನು ಗದಗ ಬೆಟಗೇರಿ ರಾಣಾ ಪ್ರತಾಪಸಿಂಹ ಪ್ರೌಢಶಾಲೆಯಲ್ಲಿ ಪೂರೈಸಿ, ಪದವಿಪೂರ್ವ ಶಿಕ್ಷಣವನ್ನು ನಗರದ ಕೆ.ವ್ಹಿ.ಎಸ್.ಆರ್ ಕಾಲೇಜಿನಲ್ಲಿ ಹಾಗೂ ಪದವಿ ಶಿಕ್ಷಣವನ್ನು ಕೆ.ಎಸ್.ಎಸ್ ಮಹಾವಿದ್ಯಾಲಯದಲ್ಲಿ ಪಡೆದರು. ಗದುಗಿನ ಪಂಚಾಚಾರ್ಯ ಶಿಕ್ಷಣ ಮಹಾವಿದ್ಯಾಲಯದಲ್ಲಿ ಬಿ.ಎಡ್ ಪದವಿಯನ್ನು ವಿಶೇಷ ದರ್ಜೆಯಲ್ಲಿ ಉತ್ತೀರ್ಣರಾದರು.

ಪದವಿಧರರಾದ ಬಳ್ಳಾರಿಯವರು ಪ್ರಾರಂಭದಲ್ಲಿ ಮೊರಾರ್ಜಿ ವಸತಿ ಶಾಲೆಯ ಶಿಕ್ಷಕರಾಗಿ, ನಂತರ ಬಿಸಿಎಮ್ ಇಲಾಖೆ ವಸತಿ ನಿಲಯ ಪಾಲಕರಾಗಿ ಸರಕಾರಿ ಸೇವೆಯನ್ನು ದಾವಣಗೇರಿ ಹಾಗೂ ಗದಗ ಜಿಲ್ಲೆಯ ವಿವಿಧೆಡೆ ಸಲ್ಲಿಸಿದರು. ಸರಕಾರಿ ಸೇವೆಗೆ ಸೇರಿದರೂ ನೀಗದ ಇವರ ಓದುವ ಹವ್ಯಾಸ ಕರ್ನಾಟಕ ವಿಶ್ವವಿದ್ಯಾಲಯದಿಂದ ಇತಿಹಾಸ ವಿಷಯದಲ್ಲಿ ಸ್ನಾತಕೋತ್ತರ ಪದವಿಯನ್ನು ಹಾಗೂ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಿಂದ ಭೂಗೋಳಶಾಸ್ತ್ರದಲ್ಲಿ ಎಂ.ಎಸ್ಸಿ ಪದವಿ, ಎಂ.ಎಡ್ (ಶಿಕ್ಷಣ ಶಾಸ್ತ್ರ) ಪದವಿ ಮತ್ತು 'ಕರ್ನಾಟಕ ರಾಜ್ಯದ ರಾಣಿ ಚನ್ನಮ್ಮ ವಸತಿ ಶಾಲೆಗಳಲ್ಲಿಯ ವಿದ್ಯಾರ್ಥಿಗಳು ಅಭ್ಯಾಸ ಮಾಡುವಲ್ಲಿಯ ಸಮಸ್ಯೆ'ಗಳ ಕುರಿತು ಸಂಶೋಧನಾ ಪ್ರಬಂಧವನ್ನು ನಾಡಿನ ಶ್ರೇಷ್ಠ ಶಿಕ್ಷಣ ತಜ್ಞ, ಹುಬ್ಬಳ್ಳಿ ಬಿ.ಇಡಿ ಕಾಲೇಜಿನ ಪ್ರಾಚಾರ್ಯ ಡಾ. ಎನ್.ಬಿ. ಕೊಂಗವಾಡರವರ ಮಾರ್ಗದರ್ಶನದಲ್ಲಿ ಪಿಎಚ್‌ಡಿ ಪದವಿ ಪಡೆದು ತಮ್ಮ ವೈಯುಕ್ತಿಕ ವೃತ್ತಿ ಗೌರವ ಹೆಚ್ಚಿಸಿಕೊಂಡರು. ಬಿಸಿಎಮ್ ಇಲಾಖೆ ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಯಾಗಿ ಮುಂಡರಗಿ, ರೋಣ ಮತ್ತು ಪ್ರಸ್ತುತ ಗದಗದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.

ತಮ್ಮ ವೈಯುಕ್ತಿಕ ವೃತ್ತಿಯೊಂದಿಗೆ ಇಲಾಖೆಯ ನೌಕರರ ನೋವು-ನಲಿವುಗಳಲ್ಲಿ ಪಾಲ್ಗೊಂಡು ನೌಕರರ ಬೇಕು-ಬೇಡಿಕೆಗಳನ್ನು ಈಡೇರಿಸುವ ಕಾಯಕದ ಮೂಲಕ ನೌಕರರ ಸಂಘಟನೆಯ ನಾಯಕರಾಗಿ ಹೊರಹೊಮ್ಮಿದರು. ಕರ್ನಾಟಕ ರಾಜ್ಯದಲ್ಲಿ ವಸತಿ ನಿಲಯ ಮೇಲ್ವಿಚಾರಕರ ಸಂಘ ಬೆಂಗಳೂರು ಇದರ ಪ್ರಧಾನ ಕಾರ್ಯದರ್ಶಿಗಾಗಿ, ಕರ್ನಾಟಕ ಸರಕಾರಿ ನೌಕರರ ಸಂಘ ಬೆಂಗಳೂರು (ಬೆಳಗಾವಿ ವಿಭಾಗ)



ಸಂಘಟನಾ ಕಾರ್ಯದರ್ಶಿಯಾಗಿ, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಮುಂಡರಗಿ ಶಾಖೆ ತಾಲೂಕಾಧ್ಯಕ್ಷರಾಗಿ, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಗದಗ ಜಿಲ್ಲಾ ಶಾಖೆಯ ಜಿಲ್ಲಾ ಗೌರವಾಧ್ಯಕ್ಷರಾಗಿ, ಕಾರ್ಯದರ್ಶಿಯಾಗಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ನೌಕರರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ಕ್ರಿಯಾತ್ಮಕವಾಗಿ ತೊಡಗಿಸಿಕೊಂಡು ನೌಕರರ ಸಂಘಟನೆಯ ರಾಜ್ಯಮಟ್ಟದ ನಾಯಕನಾಗಿ ಮುನ್ನೆಲೆಗೆ ಬಂದರು.


ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ನೌಕರ ಸಂಘಟನೆ ಜವಬ್ದಾರಿಯನ್ನು ಹೆಗಲಮೇಲೆ ಹೊತ್ತು ಕಳೆದ 25 ವರ್ಷಗಳಿಂದ ನೆನಗುದಿಗೆ ಬಿದ್ದಿದ್ದ ಪದೋನ್ನತಿ ಪ್ರಕ್ರಿಯೆಗೆ ಗೆಲವು ನೀಡಿದರು. ಗದಗ ಜಿಲ್ಲಾ ಸರಕಾರಿ ನೌಕರ ಸಂಘದ ಗೌರವಾಧ್ಯಕ್ಷರಾಗಿದ್ದ ಪ್ರೇಮನಾಥ ಗರಗ ಹಾಗೂ ಕ್ರಿಯಾಶೀಲ ವ್ಯಕ್ತಿತ್ವದ ಅಧ್ಯಕ್ಷರಾದ ರವಿ ಎಲ್.ಗುಂಜೀಕರವರ ಗರಡಿಯಲ್ಲಿ ಸಂಘಟನೆಯ ಒಳ-ಹೊರಹರಿವಿನ ಪರಿಚಯ ಪಾಠವನ್ನು ಬಹಳ ಶ್ರದ್ಧೆಯಿಂದ ಕಲಿತುಕೊಂಡು ಸಂಘಟನೆಯ ಪ್ರಮುಖ ಹುದ್ದೆಗಳನ್ನು ಮತ್ತು ಸಂಘಟನೆಯ ಹೋರಾಟ, ನೌಕರರ ಸಮ್ಮೇಳನ, ಸಭೆ, ಕ್ರೀಡಾಕೂಟ ಎಲ್ಲಾ ವಿದಾಯಕ ಉಪಕ್ರಮಗಳನ್ನು ಸಮರ್ಥವಾಗಿ ನಿರ್ವಹಿಸಿ ನೌಕರರ ಮನದಾಳದಲ್ಲಿ ಗೌರವ ಸ್ಥಾನ ಪಡೆದುಕೊಂಡರು. ಗದಗ ಜಿಲ್ಲಾ ಸರಕಾರಿ ನೌಕರ ಸಂಘದ ಮೂರು ಅವಧಿಗೆ ಅಧ್ಯಕ್ಷರಾಗಿ ಪ್ರಾಮಾಣಿಕತೆಯಿಂದ ನೌಕರರ ಸೇವೆ ಮಾಡಿ ಪ್ರೀತಿಗೆ ಪಾತ್ರರಾಗಿದ್ದ ಡಾ. ರವಿ ಗುಂಜೀಕರರು ಸೇವಾ ನಿವೃತ್ತಿ ಹೊಂದಿದಾಗ ಗದಗ ಜಿಲ್ಲೆಯ ನೌಕರ ಸಂಘಟನೆಯ ಉತ್ತರಾಧಿಕಾರಿ ಯಾರೆಂಬ ಪ್ರಶ್ನೆ ಎದುರಾಗಿತ್ತು. ಆಗ ಡಾ. ಬಸವರಾಜ ಬಳ್ಳಾರಿಯವರು ಸಂಘಟನಾ ಚತುರತೆ, ಕರ್ತವ್ಯ ನಿಭಾಯಿಸುವ ಚಲನಶೀಲತೆಯ ಪರೀಕ್ಷೆಗಳಲ್ಲಿ ಪೂರ್ಣ ಅಂಕ ಪಡೆದಿದ್ದರು. ಗದಗ ಜಿಲ್ಲಾ ಸರಕಾರಿ ನೌಕರ ಸಂಘದ ಅಧ್ಯಕ್ಷರಾಗಿ ಆಯ್ಕೆ ಮಾಡಿದಾಗ ಆಯ್ಕೆ ಕಾನೂನಬಾಹಿರ ಎಂದು ವಿರೋಧಿಸಿ ಪ್ರತಿಭಟಿಸಿದಾಗ ಚುನಾವಣೆ ಪ್ರಕ್ರಿಯೆಯಲ್ಲಿ ಡಾ. ಬಸವರಾಜ ಬಳ್ಳಾರಿ ಗೆಲವು ಸಾಧಿಸಿ ವಿರೋಧ ಬಣಕ್ಕೆ ತಕ್ಕ ಉತ್ತರ ಕೊಟ್ಟರು.



ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘವನ್ನು ಸದಾ ಕ್ರಿಯಾತ್ಮಕವಾಗಿ ಮುನ್ನಡೆಸುತ್ತ 2ನೇ ಅವಧಿಗೆ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡಿರುವ ಸಿ.ಎಸ್. ಷಡಾಕ್ಷರಿಯವರ ದೂರದೃಷ್ಟಿ ಚಿಂತನೆ ಮತ್ತು ಹೋರಾಟದಲ್ಲಿ ಎನ್.ಪಿ.ಎಸ್ ರದ್ದುಪಡಿಸಿ ಓ.ಪಿ.ಎಸ್ ಜಾರಿ, ವಿವಿಧ ವೃಂದ ನೌಕರರ ಸಿ&ಆರ್ ಹೋರಾಟ, ರಾಜ್ಯ ಸರಕಾರಿ ನೌಕರರಿಗೆ ಕೇಂದ್ರ ಸರಕಾರದ ಸಮಾನವೇತನ, ಜ್ಯೋತಿ ಸಂಜೀವಿನಿ ಅನುಷ್ಠಾನ, ಬಡ್ತಿ ಪ್ರಕ್ರಿಯೆಗೆ ಚಾಲನೆ, ನೌಕರರ ಸುಖ-ದುಃಖಗಳಿಗೆ ಪ್ರಾಮಾಣಿಕ ಸ್ಪಂದನೆ, ಜನಸ್ನೇಹಿ ಆಡಳಿತಗಳ ಮೂಲಕ ಸಾರ್ವಜನಿಕರಿಗೆ ನ್ಯಾಯ ಒದಗಿಸುವ ಕಾರ್ಯಕ್ಕೆ ಡಾ. ಬಸವರಾಜ ಬಳ್ಳಾರಿಯವರ ಕ್ರಿಯಾಶೀಲ ತಂಡ ಕೈಜೋಡಿಸುತ್ತಿದೆ. ನೌಕರ ಸಂಘದಿಂದ ಆಯೋಜನೆಗೊಳ್ಳುವ ಕ್ರೀಡಾಕೂಟ, ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ, ರಾಜ್ಯಮಟ್ಟದ ಕಾರ್ಯಾಗಾರ, ಸಮ್ಮೇಳನ, ವಿವಿಧ ಸೌಲಭ್ಯಗಳ ಕಾರ್ಯಾನುಷ್ಠಾನ ಉಪಕ್ರಮಗಳನ್ನು ಬಹಳ ವ್ಯವಸ್ಥಿತವಾಗಿ ಮುನ್ನಡೆಸಿಕೊಂಡು ಹೋಗುತ್ತಿದ್ದಾರೆ.

ಗದಗ ಶಹರದ ಕೆವಿಎಸ್‌ಆರ್ ಪ್ರೌಢಶಾಲಾ ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸುತ್ತಿರುವ ತ್ಯಾಗಮೂರ್ತಿ, ಸಹನಶೀಲ, ಗುಣಶೀಲ ಮತ್ತು ಮನೆತನದ ನಿರ್ವಹಣೆಯಲ್ಲಿಯ ಸಹಕಾರ, ತನ್ನೆಲ್ಲಾ ಬೆಳವಣಿಗೆಗೆ ಕಾರಣರಾದ ಸಹಧರ್ಮಿಣಿ ಪುಷ್ಪಾವತಿ ಅವರನ್ನು ಆಗಾಗ ಬಸವರಾಜ ಬಳ್ಳಾರಿಯವರು ನೆನಪಿಸಿಕೊಳ್ಳುತ್ತಾರೆ. ಹಿರಿಯ ಪುತ್ರಿ ಸ್ಫೂರ್ತಿ ಎಮ್.ಬಿ.ಬಿ.ಎಸ್, ಕಿರಿಯ ಪುತ್ರಿ ಸಂಪ್ರೀತಿ ಎಸ್‌ಎಸ್‌ಎಲ್‌ಸಿ ಹಾಗೂ ಪುತ್ರ ಸುಹಾಸ ಪ್ರೌಢಶಿಕ್ಷಣ ಪಡೆಯುತ್ತಿದ್ದಾರೆ. ಸುಖೀ ಜೀವನ ಪಯಣದ ಪಥದಲ್ಲಿ ಮುಂಡರಗಿ ತಾ.ಪಂ ಸದಸ್ಯರಾಗಿ ಎರಡು ಬಾರಿ ಚುನಾಯಿತರಾದ ಇವರ ತಂದೆ ವೆಂಕಪ್ಪನವರು ಅಧ್ಯಕ್ಷರಾಗಿ, ಉಪಾಧ್ಯಕ್ಷರಾಗಿ, ಸ್ಥಾಯಿ ಕಮಿಟಿ ಚೇರಮನ್‌ರಾಗಿ ಜನಸೇವೆ ಮೂಲಕ ಚಿರಪರಿಚಿತರಾದರೆ, ತಾಯಿ ನಾಗಮ್ಮ ಎರಡು ಅವಧಿಗೆ ಗ್ರಾ.ಪಂ ಸದಸ್ಯರಾಗಿ ಚುನಾಯಿತರಾಗಿ, ಎರಡು ಅವಧಿಯಲ್ಲಿ ಅಧ್ಯಕ್ಷರಾಗಿ ಸಾರ್ಥಕ ಸೇವೆ ಸಲ್ಲಿಸುತ್ತಿದ್ದಾರೆ. ಮುಂಡರಗಿ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಯಲ್ಲಿ ದೈಹಿಕ ಶಿಕ್ಷಣ ಶಿಕ್ಷಕರಾಗಿ ಸಹೋದರ ಮಂಜುನಾಥ,





ಅವರ ಧರ್ಮಪತ್ನಿ ಶೀಲಾವತಿ ಹಮ್ಮಿಗಿಯ ಸರಕಾರಿ ಶಾಲೆಯಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕಿಯಾಗಿ, ಇನ್ನೋರ್ವ ಸಹೋದರ ರಾಮಚಂದ್ರ ಹುಬ್ಬಳ್ಳಿ ಜೈನ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಪ್ರಾಧ್ಯಾಪಕರಾಗಿ, ಅವರ ಧರ್ಮಪತ್ನಿ ಶೋಭಾವತಿ ಗದಗ ನ್ಯಾಯಾಲಯದಲ್ಲಿ ಎಸ್.ಡಿ.ಎ ಆಗಿ ಕರ್ತವ್ಯ ನಿರ್ವಹಿಸಿದರೆ, ಕೊನೆಯ ಸಹೋದರ ಸಿದ್ದರಾಮ ತಂದೆಯವರೊಂದಿಗೆ ಕೃಷಿ ಚಟುವಟಿಕೆಗಳಲ್ಲಿ ತೆ-ಡಗಿದ್ದಾರೆ. ಅಮೀನಗಡದಲ್ಲಿ ಪ್ರೌಢಶಾಲಾ ಶಿಕ್ಷಕರಾಗಿರುವ ಪ್ರೇಮನಾಥನೊಂದಿಗೆ ಸಪ್ತಪದಿ ತುಳಿದ ಸಹೋದರಿ ನಾಗರತ್ನ ಪ್ರಾಥಮಿಕ ಶಾಲಾ ಶಿಕ್ಷಕಿಯಾಗಿ ಹುನಗುಂದದಲ್ಲಿ ನೆಲೆಸಿದ್ದಾರೆ. ಸೋದರತ್ತೆ ಟಿ.ಟಿ. ಬಿಸನಳ್ಳಿಯವರು ನಿವೃತ್ತ ಮುಖ್ಯೋಪಾಧ್ಯಾರಾಗಿ ವಿಶ್ರಾಂತ ಜೀವನವನ್ನು ಇವರೊಟ್ಟಿಗೆ ಕಳೆಯುತ್ತಿದ್ದಾರೆ. 5 ಗಂಡು ಮಕ್ಕಳು, 6 ಹೆಣ್ಣು ಮಕ್ಕಳು ಸೇರಿ ಒಟ್ಟು 22 ಸದಸ್ಯರನ್ನು ಒಳಗೊಂಡಿರುವ ಬಳ್ಳಾರಿಯವರ ಮನೆತನ ಆಧುನಿಕ ಅವಿಭಕ್ತ ಕುಟುಂಬದೊಂದಿಗೆ ಸಾರ್ಥಕ ಬದುಕು ಸಾಗಿಸುತ್ತ ಆದರ್ಶಪ್ರಾಯರಾಗಿದ್ದಾರೆ.

ಡಾ. ಬಸವರಾಜ ಬಳ್ಳಾರಿ ಅವರ ಸರಕಾರಿ ಸೇವೆಯನ್ನು ಗುರುತಿಸಿದ ಕರ್ನಾಟಕ ಸರಕಾರ ಗದಗ ಜಿಲ್ಲಾ ಸರ್ವೋತ್ತಮ ಪ್ರಶಸ್ತಿ ಹಾಗೂ ಸಂಘಟನೆ, ಸಾಮಾಜಿಕ, ಶೈಕ್ಷಣಿಕ ಸೇವೆ ಪರಿಗಣಿಸಿ ಡಾ. ರಾಜಕುಮಾರ ಸದ್ಭಾವನಾ ರಾಜ್ಯ ಪ್ರಶಸ್ತಿ, ದಾನ ರತ್ನ ಪ್ರಶಸ್ತಿ, ಕಾರ್ಯಾಂಗಶ್ರೀ ವಿಶ್ವವಿಜಯರತ್ನ ಪ್ರಶಸ್ತಿ ನೀಡಿ ಸನ್ಮಾನಿಸಿದರೆ, 2024ರಲ್ಲಿ ವಿಶ್ವವಾಣಿ ದಿನಪತ್ರಿಕೆ ಜಪಾನ್‌ನ ಟೋಕಿಯೋದಲ್ಲಿ ಗ್ಲೋಬಲ್ ಅಚೀವರ್ಸ್ ಬಿರುದು ನೀಡಿ ಗೌರವಿಸಿದೆ. ಡಾ. ಬಸವರಾಜ ಬಳ್ಳಾರಿಯವರ ಅಧಿಕಾರಾವಧಿಯಲ್ಲಿ ಜಿಲ್ಲೆಯ ನೌಕರ ಬಾಂಧವರ ಬೇಕು-ಬೇಡಿಕೆಗಳು ಈಡೇರಲಿ. ನೌಕರರ ನೋವು-ನಲಿವುಗಳಿಗೆ ಸದಾ ಸ್ಪಂದಿಸಿ ಇವರ ಮೇಲೆ ಇಟ್ಟಿರುವ ಗೌರವ ಹೆಚ್ಚಾಗಲಿ ಮತ್ತು ಸಂಘಟನೆಯ ಚಟುವಟಿಕೆಗಳು ಸಂಪೂರ್ಣ ಅನುಷ್ಠಾನಗೊಂಡು ಅನುಕರಣೀಯವಾಗಲೆಂದು ನಾಡಿನ ಅನೇಕ ಮಠಾಧೀಶರು, ಜನಪ್ರತಿನಿಧಿಗಳು, ಬಿ.ಸಿ.ಎಮ್ ಇಲಾಖೆ ಆಪ್ತರು, ಜಿಲ್ಲೆಯ ಸಮಸ್ತ ನೌಕರ ಬಾಂಧವರು, ಅವರ ಅಭಿಮಾನಿ ಬಳಗ, ಸ್ನೇಹಿತರು, ವಿದ್ಯಾರ್ಥಿ ಬಳಗದವರು ಶುಭಹಾರೈಸಿ ಅಭಿನಂದಿಸಿದ್ದಾರೆ.



**- ವಿಶ್ವನಾಥ ಯ.ಕಮ್ಮಾರ.**
ಅಧ್ಯಾಪಕರು, ಬಿವಿಬಿ
ಗೆಳಯರ ಬಳಗ-ಗದಗ.

# ಮುಹಮ್ಮದ ಪೈಗಂಬರರ ಜಯಂತಿ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಈದ್‌ಮಿಲಾದ ಕಮಿಟಿಯ ವತಿಯಿಂದ ಪ್ರವಾದಿ ಮುಹಮ್ಮದ ಪೈಗಂಬರರ ಜಯಂತಿಯ ನಿಮಿತ್ತ 2025ನೇ ಸಾಲಿನ ಸಮಿತಿಯ ಅಧ್ಯಕ್ಷರ ನೇತೃತ್ವದಲ್ಲಿ ಅನ್ನಸಂತರ್ಪಣೆ, ರಕ್ತದಾನ ಶಿಬಿರ, ಉಚಿತ ಆರೋಗ್ಯ ಶಿಬಿರ, ಉರ್ದು ಶಾಲಾ ಮಕ್ಕಳಿಗೆ ಸ್ಕೂಲ್ ಬ್ಯಾಗ್ ವಿತರಣೆ, ಬಡ ಮಹಿಳೆಯರಿಗೆ ಸೀರೆ ವಿತರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಉದ್ಘಾಟನೆಯನ್ನು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ನೆರವೇರಿಸಿದರು. ಸಾನ್ನಿಧ್ಯವನ್ನು ಪರಮ ಪೂಜ್ಯ




ಕಲ್ಲಯ್ಯಜ್ಜನವರು ವಹಿಸಿದ್ದರು. ಉಪನ್ಯಾಸಕರಾಗಿ ಮೌಲಾನ ಮುಫ್ತಿ ಮಹಮ್ಮದ ನಿಜಾಮುದ್ದೀನ ಕಾಸ್ತಿ ಆಗಮಿಸಿದ್ದರು. ವಿಶೇಷ ಆಮಂತ್ರಿತರಾದ ಮೌಲಾನ ಇನಾಯಿತುಲ್ಲಾಸಾಬ ಪೀರೆಜಾದೆ ಹಾಗೂ ರಜಾಕ ಡಕೇದ ಇವರ ಉಪಸ್ಥಿತಿಯಲ್ಲಿ ಮೌಲಾನ ಅಬ್ದುಲ್ ರಹೀಮ ಚಂದುನವರು ಪ್ರಾರ್ಥನೆ ಮಾಡಿದರು. ಕಾರ್ಯಕ್ರಮವನ್ನುದ್ದೇಶಿ ಉಪನ್ಯಾಸ ನೀಡಿದ ಮೌಲಾನ ನಿಜಾಮುದ್ದೀನ, ಪ್ರವಾದಿ ಮುಹಮ್ಮದ ಪೈಗಂಬರರು ಜಗತ್ತಿನ ಮಾನವ ಕುಲಕ್ಕಾಗಿ ಸಂದೇಶ ನೀಡಿದರು. ಇಂತಹ ಕಾರ್ಯಕ್ರಮವನ್ನು ಜಾತ್ಯಾತೀತವಾಗಿ ಪ್ರತಿ ವರ್ಷ ಎಲ್ಲ ಸಮುದಾಯದ ಜನರನ್ನು ಒಳಗೊಂಡು ಮಾಡಬೇಕು. ಗದುಗಿನ ಜನತೆ ರಾಜ್ಯಕ್ಕೆ ಮಾದರಿಯಾಗುವಂತೆ ಆಡಂಬರವಿಲ್ಲದ ಅರ್ಥಪೂರ್ಣ ಜಯಂತಿ ಮಾಡುತ್ತಿರುವುದು ಸಂತೋಷದ ವಿಷಯ ಎಂದು ಹೇಳಿದರು. ಕಾರ್ಯಕ್ರಮದ ಆಯೋಜಕರಾದ ಜನಾಬ ಉಸ್ಮಾನ ಮಾಳೆಕೊಪ್ಪ, ಜನಾಬ ಆರೀಫ ಹುನಗುಂದ, ಜನಾಬ ಶೌಕತ್ ಅಣ್ಣಿಗೇರಿ, ಜನಾಬ ಅಶಪಾಕಅಲಿ ಹೊಸಳ್ಳಿ, ಜನಾಬ ಶೌಕತಅಲಿ ಕಾತರಕಿ, ಜನಾಮ ಇಮಾಮಸಾಬ ನಮಾಜಿ, ಜನಾಬ ತೌಸಿಫ ಢಾಲಾಯತ, ಜನಾಬ ಜಾಕೀರ ಬಾಗಲಕೋಟ, ಜನಾಬ ಅಕ್ಬರ ಅತ್ತಾರ, ಜನಾಬ ಅಬ್ದುಲ್ ಉಮಚಗಿ, ಜನಾಬ ಹನೀಫ ಮುಳಗುಂದ, ಜನಾಬ ಮೆಹಬೂಬಸಾಬ ರೋಣ, ಜನಾಬ ಅನ್ವರ ಈಟಿ, ಜನಾಬ ಸಲೀಮ ಬಳ್ಳಾರಿ ಪಾಲ್ಗೊಂಡಿದ್ದರು. ಜನಾಬ ಮಹಮ್ಮದಶಫಿ ಯರಗುಡಿ ನಿರೂಪಿಸಿದರು. ಭಾಷಾಸಾಬ ಮಲ್ಲಸಮುದ್ರ ವಂದಿಸಿದರು.

# ದೇಶವಾಸಿಗಳಿಗೆ ಮೋದಿ ಉಡುಗೊರೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರ ದೇಶವಾಸಿಗಳಿಗೆ ಭರ್ಜರಿ ಉಡುಗೊರೆ ನೀಡಿದೆ. ಮಧ್ಯಮ ವರ್ಗದವರು, ಬಡವರ ಏಳಿಗೆಗಾಗಿ ಜಿಎಸ್‌ಟಿ ದರದಲ್ಲಿ ಭಾರೀ ಇಳಿಕೆ ಮಾಡಲಾಗಿದೆ. ಕೇವಲ ಶೇ. 5 ಜಿಎಸ್‌ಟಿ ಮತ್ತು ಶೇ. 18ರಷ್ಟು ತೆರಿಗೆ ಜಾರಿಗೆ ತಂದಿದ್ದು ಸ್ವಾಗತಾರ್ಹವಾಗಿದೆ. ಇದರಿಂದ ಮಹಿಳೆಯರು ಸ್ವಾವಲಂಬಿಗಳಾಗಿ ಬದುಕಲು ಸಾಧ್ಯವಾಗುತ್ತದೆ ಎಂದು ಗದಗ-ಬೆಟಗೇರಿ ಶಹರ ಬಿಜೆಪಿ ಮಹಿಳಾ ಮೋರ್ಚಾ ಪ್ರಧಾನ ಕಾರ್ಯದರ್ಶಿ ಸ್ವಾತಿ ಅಕ್ಕಿ ಅಭಿಪ್ರಾಯಪಟ್ಟಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ನಿರ್ಮಲಾ



ಸೀತಾರಾಮನ್ ಅವರ ಅಧ್ಯಕ್ಷತೆಯಲ್ಲಿ ನಡೆಯುತ್ತಿರುವ 56ನೇ ಜಿಎಸ್‌ಟಿ ಮಂಡಳಿ ಸಭೆಯಲ್ಲಿ ಈ ಮಹತ್ವದ ತೆರಿಗೆ ಬದಲಾವಣೆಗಳಿಗೆ ಅನುಮೋದನೆ ನೀಡಲಾಗಿದೆ. ಸಾಮಾನ್ಯ ಜನರು ಮತ್ತು ಮಧ್ಯಮ ವರ್ಗದವರು ಬಳಸುವ ವಸ್ತುಗಳ ಮೇಲೆ ಸಂಪೂರ್ಣ ತೆರಿಗೆ ಕಡಿತ ಮಾಡಲಾಗಿದೆ. ಎಲ್ಲಾ ರಾಜ್ಯಗಳು ಜಿಎಸ್‌ಟಿ ದರ ತರ್ಕಬದ್ಧಗೊಳಿಸುವಿಕೆಗೆ ಬೆಂಬಲ ನೀಡಿವೆ ಮತ್ತು ಇದು ಒಮ್ಮತದ ನಿರ್ಧಾರವಾಗಿದೆ.

ಜಿಎಸ್‌ಟಿ ದರದಲ್ಲಿನ ಇಳಿಕೆಯಿಂದಾಗಿ ಭಾರತದ ಆರ್ಥಿಕತೆಗೆ ಮತ್ತಷ್ಟು ವೇಗ ಸಿಗಲಿದೆ. ಪ್ರಮುಖವಾಗಿ ಸಾಮಾನ್ಯ ಜನರು ಬಳಸುವ ಅಡುಗೆ ವಸ್ತುಗಳ ಮೇಲಿನ ಜಿಎಸ್‌ಟಿ ದರ ಇಳಿಕೆ ಮಾಡಿದ್ದು ದೇಶದ ಮಹಿಳೆಯರ ಸಂತಸವನ್ನು ಇಮ್ಮಡಿಗೊಳಿಸಿದೆ. ವಿರೋಧ ಪಕ್ಷದವರು ಸದಾಕಾಲ ಜಿಎಸ್‌ಟಿ ಬಗ್ಗೆ ವಿರೋಧ ಮಾಡುತ್ತಲೇ ಬಂದಿದ್ದರು. ಆದರೆ, ಅವರೆಲ್ಲರ ಬಾಯಿ ಮುಚ್ಚಿಸುವ ಕೆಲಸವನ್ನು ಕೇಂದ್ರ ಸರ್ಕಾರ ಮಾಡಿದೆ ಎಂದು ಸ್ವಾತಿ ಅಕ್ಕಿ ಅಭಿಪ್ರಾಯಪಟ್ಟಿದ್ದಾರೆ.

# ಆರ್.ವಿ. ದೇಶಪಾಂಡೆ ಮಹಿಳೆಯರ ಕ್ಷಮೆ ಯಾಚಿಸಲಿ

■ ವಿಜಯಸಾಕ್ಷಿ ಸುದ್ದಿ, ಗದಗ



ನಾಡಿನ ಹೆಮ್ಮೆಯ ಪತ್ರಕರ್ತರಾದ ಗ್ಯಾರಂಟಿ ನ್ಯೂಸ್ ಸಂಪಾದಕಿ ರಾಧಾ ಹಿರೇಗೌಡರ್ ಅವರಿಗೆ ಅತ್ಯಂತ ಬೇಜವಾಬ್ದಾರಿಯ ಹಾಗೂ ಉಡಾಫೆಯ ಮಾತನಾಡಿರುವ ಆರ್.ವಿ. ದೇಶಪಾಂಡೆ ಸಮಸ್ತ ಸ್ತ್ರೀಕುಲಕ್ಕೆ ಅವಮಾನ ಮಾಡಿದ್ದಾರೆ ಎಂದು ಬಿಜೆಪಿ ಗದಗ ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷರಾದ ನಿರ್ಮಲಾ ಕೊಳ್ಳಿ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಧಾ ಹಿರೇಗೌಡರ್ ಸಾಮಾಜಿಕ ಕಳಕಳಿಯಿಂದ ಆಸ್ಪತ್ರೆ ಬಗ್ಗೆ ಬೇಡಿಕೆ ಇಟ್ಟಾಗ, ತಾಯ್ತನ ಹಾಗೂ ಹೆರಿಗೆ ಕುರಿತು ಆಡಿರುವ ಮಾತು ಮತ್ತು ಹಾವಭಾವ ಸಹಿಸಲು ಸಾಧ್ಯವಿಲ್ಲ. ಹಿರಿಯ ಮುಖಂಡರಾಗಿ, ಸುದೀರ್ಘ ಅವಧಿಗೆ ಅಧಿಕಾರ ನಡೆಸಿದ ಅನುಭವವುಳ್ಳ ದೇಶಪಾಂಡೆ ಅವರೇ ಇಂತಹ ವರ್ತನೆ ತೋರಿದರೆ, ಕಾಂಗ್ರೆಸ್ಸಿನ ಮರಿ ಪುಡಾರಿಗಳು ಇನ್ನು ಹೇಗೆ ವರ್ತಿಸಬಹುದು ಎಂದು ಪ್ರಶ್ನಿಸಿದ್ದಾರೆ.

ಹಲವು ಬಾರಿ ಸಚಿವರಾಗಿ, ಜಿಲ್ಲೆಯ ಉಸ್ತುವಾರಿ ಮಂತ್ರಿಯಾಗಿ, ಪ್ರಸ್ತುತ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷರಾಗಿರುವ ಆರ್.ವಿ. ದೇಶಪಾಂಡೆ ಅವರಿಗೆ ಇಂತಹ ಮಾತು ಶೋಭೆಯಲ್ಲ. ಅವರ ದರ್ಪ, ದೌಲತ್ತು ಏನಿದ್ದರೂ ಕೆಲಸದ ಮೂಲಕ ತೋರಿಸಬೇಕಿತ್ತು. ಅವಮಾನಿಸಿ ಮಹಿಳಾ ಪತ್ರಕರ್ತರ ಬಾಯಿ ಮುಚ್ಚಿಸುವ ತಂತ್ರದಿಂದ ನಾಡಿನ ಸ್ತ್ರೀಕುಲಕ್ಕೆ ಬೇಸರವಾಗಿದೆ. ಕಾಂಗ್ರೆಸ್ಸಿನವರು ಮಾತೆತ್ತಿದರೆ ಮಹಿಳಾ ಸಬಲೀಕರಣ ಮತ್ತು ಸಾಮಾಜಿಕ ನ್ಯಾಯದ ಬಗ್ಗೆ ಊರೆಲ್ಲಾ ಹೇಳಿಕೊಂಡು ಓಡಾಡುತ್ತಾರೆ. ಆದರೆ ಮಹಿಳೆಯರ ಬಗ್ಗೆ ಹಾಗೂ ಮಾತೃತ್ವದ ಬಗ್ಗೆ ಗೌರವವೇ ಇಲ್ಲದವರಿಂದ ಸಮಾಜ ಇನ್ನೇನು ನಿರೀಕ್ಷಿಸಬಹುದು ಎಂದು ಪ್ರಶ್ನಿಸಿದ್ದಾರೆ.

**ಜಿಲ್ಲಾ ಮಟ್ಟದ ಚರ್ಚಾ ಸ್ಪರ್ಧೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ**

# ಅಭಿವೃದ್ಧಿ ವಿಚಾರದಲ್ಲಿ ಯುವಕರ ಪಾತ್ರ ಮುಖ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರ ಇಲಾಖೆ, ಗದಗ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್, ಜಗದ್ಗುರು ತೋಂಟದಾರ್ಯ ಮಹಾವಿದ್ಯಾಲಯ ಗದಗ ಇವರ ಸಹಯೋಗದೊಂದಿಗೆ ಆಯ್ದ ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆ ಹಾಗೂ ಜಿಲ್ಲೆಯ ಎಲ್ಲಾ ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದ ಚರ್ಚಾ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು.

ಪ್ರಶಸ್ತಿ ಪತ್ರ ವಿತರಣಾ ಸಮಾರಂಭದಲ್ಲಿ ಪ.ಪೂ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸಿದ್ದಲಿಂಗ ಬಂಡು ಮಸನಾಯಕ ಮಾತನಾಡುತ್ತಾ, ಸಹಕಾರ ಕ್ಷೇತ್ರದ



ಅಭಿವೃದ್ಧಿ ವಿಚಾರದಲ್ಲಿ ಯುವಕರ ಪಾತ್ರ ಬಹಳ ಮುಖ್ಯವಾಗಿದೆ. ಶಾಲಾ-ಕಾಲೇಜು ಪಠ್ಯದಲ್ಲಿ ಸಹಕಾರ ವಿಷಯ ಸೇರ್ಪಡೆ ಹಾಗೂ ಸಹಕಾರ ವಿಶ್ವವಿದ್ಯಾಲಯಗಳ ಸ್ಥಾಪನೆಯಿಂದ ಸಹಕಾರಿ ವ್ಯವಸ್ಥೆ ಸದೃಢಗೊಳ್ಳಲು ಅನುಕೂಲವಾಗುತ್ತದೆ ಎಂದರು.

ಗದಗ ಜಿಲ್ಲಾ ಸಹಕಾರ ಯೂನಿಯನ್ನಿನ ನಿರ್ದೇಶಕ ಎಸ್.ಎಸ್. ಪಟ್ಟಣಶೆಟ್ಟಿ ಮಾತನಾಡುತ್ತಾ, ಕೇಂದ್ರ ಸರ್ಕಾರವು ಸಹಕಾರ ಸಚಿವಾಲಯ ಪ್ರಾರಂಭಿಸುವುದರೊಂದಿಗೆ ವಿಶಿಷ್ಟ ಯೋಜನೆಗಳನ್ನು ಹಾಕಿಕೊಂಡು ಅದಕ್ಕನುಗುಣವಾಗಿ ಹಣ ಬಿಡುಗಡೆ ಮಾಡಿ ಈ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ವಾಯ್.ಎಫ್. ಪಾಟೀಲ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಸಹಕಾರ ಸಂಘಗಳ ಉಪನಿಬಂಧಕರಾದ ಎಸ್.ಎಸ್. ಕಬಾಡೆ, ಸಹಕಾರ ಸಂಘಗಳ ಸಹಾಯಕ ನಿಬಂಧಕರಾದ ಪುಷ್ಪಾ ಕೆ.ಕಡಿವಾಳರ, ಪ್ರಶಾಂತ ಮುಧೋಳ ಪಾಲ್ಗೊಂಡಿದ್ದರು. ತೀರ್ಪುಗಾರರಾಗಿ ವಿಶ್ರಾಂತ ಸಹಕಾರ ಸಂಘಗಳ ಸಹಾಯಕ ನಿಬಂಧಕರಾದ ಎಂ.ಸಿ. ಉಪ್ಪಿನ, ಕ.ಹಾ.ಮ ತರಬೇತಿ ಕೇಂದ್ರದ ನಿವೃತ್ತ ಜಂಟಿ ನಿರ್ದೇಶಕರಾದ ಎಂ.ಬಿ. ಮಡಿವಾಳರ, ಕೆ.ಆಯ್.ಸಿ.ಎಂ ಪ್ರಾಂಶುಪಾಲರಾದ ಡಿ.ಆರ್. ವೆಂಕಟರಾಮ, ದಿ ಮರ್ಚಂಟ ಅರ್ಬನ್ ಕೋ-ಆಪ್ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕ ಬಸವರಾಜ ನಾಯಕವಾಡಿ ಭಾಗವಹಿಸಿದ್ದರು.

ಕಾವೇರಿ ಹೂಗಾರ ಮತ್ತು ಶಿವಗಂಗಾ ಚವಡಿ ಪ್ರಾರ್ಥಿಸಿದರು. ಚಂದ್ರಶೇಖರ ಎಸ್.ಕರಿಯಪ್ಪನವರ ಸ್ವಾಗತಿಸಿ ನಿರೂಪಿಸಿದರು. ರಶೀದಾಬಾನು ಸಿ.ಯಲಿಗಾರ ವಂದಿಸಿದರು.

ಜ. ತೋಂಟದಾರ್ಯ ಮಹಾವಿದ್ಯಾಲಯದ ಪ್ರಾಂಶುಪಾಲ ಪಿ.ಜಿ. ಪಾಟೀಲ ಮಾತನಾಡುತ್ತಾ, ಕಣಗಿನಹಾಳದಲ್ಲಿ ಹುಟ್ಟಿರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಇಡೀ ಏಷ್ಯಾ ಖಂಡದಲ್ಲಿ ಪ್ರಥಮ ಸಹಕಾರ ಸಂಘ ಎಂಬ ಹೆಗ್ಗಳಿಕೆ ಪಾತ್ರವಾಗಿದೆ. ಇತ್ತೀಚೆಗೆ ಸಹಕಾರ ಕ್ಷೇತ್ರದಲ್ಲಿ ಅಷ್ಟೇ ಅಲ್ಲದೇ ಎಲ್ಲಾ ಕ್ಷೇತ್ರಗಳಲ್ಲಿ ಮಹಿಳೆಯರ ಭಾಗವಹಿಸುವಿಕೆ ಹೆಚ್ಚಾಗಿದ್ದು, ದೇಶದ ಅಭಿವೃದ್ಧಿಗೆ ಉತ್ತೇಜನಕಾರಿಯಾಗಿದೆ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka